# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**
ತನ್ನ ಇಂದ್ರಿಯಗಳ ಮೇಲೆ ಹತೋಟಿ ಇಟ್ಟು ಕೊಳ್ಳಲಾಗದವನು ಇಡೀ ಪ್ರಪಂಚವನ್ನೇ ಗೆದ್ದು ಬೀಗಿದರೂ ಫಲ ಸಿಗಲಾರದು..
ಸಕಲ ಚರಾಚರ ವಸ್ತುಗಳ ಪರಮ ಪಿತನು ಶ್ರೀಹರಿಯೇ ಎಂಬ ಸತ್ಯವನು ಅರಿಯದವನು ಕವಯಿತ್ರಿಯಾಗಿ ಜ್ಞಾನಭಂಡಾರ ಎಂಬ ಬಿರುದು ಪಡೆದರೂ ಸುಖ ಲಭಿಸಲಾರದು..
ಮೂಲವನ್ನೇ ಅರಿತು ಬಾಳಲಾಗದವನು ಎಂದಿಗೂ ಮನುಷ್ಯನಾಗಲು ಸಾಧ್ಯವಾಗದು..
**ಭಗವಾನ್ ಶ್ರೀಕೃಷ್ಣ**



REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 25-10-2024 to 31-10-2024 ಬೆಲೆ: 7-00 ಸಂಪುಟ–4 ಸಂಚಿಕೆ–18 ಪುಟಗಳು–6

ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು






ಪೊಲೀಸರನ್ನು ಕಂಡರೆ ಮೂಗು ಮುರಿದುಕೊಳ್ಳುವವರೇ ಹೆಚ್ಚು. ಅದರಲ್ಲೂ ಸಿನಿಮಾಗಳಲ್ಲಿ ಪೊಲೀಸರನ್ನು ಕೆಲವು ಕಡೆ ವಿಲನ್‌ಗಳಾಗಿ ತೋರಿಸಿದರೆ, ಇನ್ನು ಕೆಲವು ಕಡೆ ಹಾಸ್ಯ ಮಾಡಲಾಗುತ್ತದೆ. ಇಂತಹ ಪೊಲೀಸರು ಹೊಟ್ಟೆಪಾಡಿಗಾಗಿ ಮಾತ್ರ ಈ ಕೆಲಸಕ್ಕೆ ಬಂದಿರುತ್ತಾರೆ ಎಂದು ನಾವು ಅಂದುಕೊಂಡಿರುತ್ತೇವೆ. ಆದರೆ ಹೆಚ್ಚಿನ ಪೊಲೀಸರು ಇನ್ನೊಬ್ಬ ಪೊಲೀಸರಿಂದ ಸ್ಪೂರ್ತಿ ಪಡೆದು ಬಂದಿರುವವರೂ ಇದ್ದಾರೆ. ಪೊಲೀಸ್ ಕೆಲಸದಲ್ಲಿ ರಜೆ ಇಲ್ಲದೆ ದುಡಿಯಬೇಕಾಗುತ್ತದೆ. ಸಮಯಕ್ಕೆ ಊಟ ತಿಂಡಿ ಸಿಗುವುದಿಲ್ಲ. ಎಷ್ಟೋ ಸಲ ಮಳೆ ಗಾಳಿ ಎನ್ನದೆ ದುಡಿಯುತ್ತಾರೆ. ಪೊಲೀಸರು ಇರುವುದರಿಂದ ನಾವು ಆರಾಮವಾಗಿದ್ದೇವೆ ಎನ್ನುವುದನ್ನು ಮರೆಯದೆ ಪೊಲೀಸರಿಗೆ ಗೌರವ ಕೊಡುವುದನ್ನು ರೂಡಿಸಿಕೊಳ್ಳಬೇಕಾಗಿದೆ.

## ಬಿಜೆಪಿ ಅಭ್ಯರ್ಥಿ ಕಿಶೋರ್ ಕುಮಾರ್‌ಗೆ ಜಯ



**ಮಂಗಳೂರು:** ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಸ್ಥಳೀಯ ಸಂಸ್ಥೆಗಳಿಂದ ವಿಧಾನ ಪರಿಷತ್ತಿಗೆ ನಡೆದ ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಕಿಶೋರ್ ಕುಮಾರ್ ಪುತ್ತೂರು ಅವರು 1697 ಮತಗಳ ಅಂತರ ದಿಂದ ಜಯ ಸಾಧಿಸಿದ್ದಾರೆ. ಕಿಶೋರ್ ಕುಮಾರ್ ಅವರು 3,655 ಮತ ಪಡೆದಿದ್ದಾರೆ. 1958ಮತ ಗಳಿಸಿದ ಕಾಂಗ್ರೆಸ್ ಅಭ್ಯರ್ಥಿ ರಾಜು ಪೂಜಾರಿ ಅವರು ದ್ವಿತೀಯ ಸ್ಥಾನ ಪಡೆದಿದ್ದಾರೆ. ಎಸ್‌ಡಿಪಿಐನ ಅನ್ವರ್ ಸಾದತ್ 195 ಮತ ಪಡೆದರೆ, ಪಕ್ಷೇತರ ಅಭ್ಯರ್ಥಿ ದಿನಕರ ಉಳ್ಳಾಲ್ 9 ಮತ **3ನೇ ಪುಟಕ್ಕೆ**

## ಚಿತ್ರಾಪುರದಲ್ಲಿ ಕೋಟಿ ಗಾಯತ್ರಿ ಜಪ ಯಾಗ..



**ಮಂಗಳೂರು:** ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಕೇಂದ್ರ ಸಮಿತಿ ಹಾಗೂ ಮಹಾ ಸಭಾದ ದಕ್ಷಿಣ ಕನ್ನಡ ಜಿಲ್ಲಾ ಘಟಕ ಜಂಟಿ ಯಾಗಿ ಮಂಗಳೂರಿನ ಚಿತ್ರಾಪುರ ಮಠದ ಸಹಕಾರದೊಂದಿಗೆ ಗಾಯತ್ರಿ ಸಂಗಮ ಸಾಂಘಿಕ ಕೋಟಿ ಗಾಯತ್ರಿ ಜಪಯಜ್ಞವನ್ನು ಅ.27ರಂದು ಮಂಗಳೂರಿನ ಕುಳಾಯಿ ಚಿತ್ರಾ ಪುರ ಶ್ರಿದುರ್ಗಾ ಪರಮೇಶ್ವರಿ ಸನ್ನಿಧಿಯಲ್ಲಿ ಆಯೋಜಿಸಲಾಗಿದೆ ಎಂದು ಮಹಾಸಭಾದ ಅಧ್ಯಕ್ಷರಾದ ಮಹೇಶ್ ಕಜೆ ತಿಳಿಸಿದರು. ಸಂವರ್ಧನೆ, ಸಂಘಟನೆ, ಸದೃಢ ರಾಷ್ಟ್ರ ಸ್ಥಾಪನೆ, ಬ್ರಹ್ಮ ತೇಜದ ಸಂವರ್ಧನೆ ತನ್ಮೂಲಕ ಭಿನ್ನ ಪಥಗಳ ಪಂಗಡಗಳ **3ನೇ ಪುಟಕ್ಕೆ**

## ವಿದ್ಯಾರ್ಥಿಗಳ ಹೋರಾಟ: ನಿರ್ಬಂಧ ಸಡಿಲ



**ಮಂಗಳೂರು:** ಮಂಗಳೂರು ವಿ ವಿ ವ್ಯಾಪ್ತಿ ಯ ಸರಕಾರಿ ಕಾಲೇಜುಗಳಲ್ಲಿ ಎಮ್ ಎಸ್ ಡಬ್ಲ್ಯೂ ಸ್ನಾತಕೋತ್ತರ ಪದವಿಯ ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ ಸ್ಪೆಷಲೈಜೇಷನ್ ವಿಷಂಯುದ ಆಯ್ಕೆಗೆ ವಿದ್ಯಾರ್ಥಿಗಳ ಸಂಖ್ಯೆಯ ನಿಯಮ ಹಾಕಲಾಗಿತ್ತು. ಈ ಪದವಿಯಲ್ಲಿ ಮಾನವ ಸಂಪನ್ಮೂಲ, ಮೆಡಿಕಲ್ ಸೈಕ್ಯಾಟ್ರಿ ಮತ್ತು ಸಮೂಹಾಭಿವೃದ್ಧಿ ಎಂಬ 3 ಸ್ಪೆಷಲೈಜೇಶನ್ ವಿಷಯಗಳಿದ್ದು, ಪ್ರತಿವರ್ಷ ವಿದ್ಯಾರ್ಥಿಗಳೇ **3ನೇ ಪುಟಕ್ಕೆ**






## ವಿದ್ಯಾರ್ಥಿಗಳ ಹೋರಾಟ: ನಿರ್ಬಂಧ ಸಡಿಲ

ಒಂದನೇ ಪುಟದಿಂದ......

ತಮ್ಮ ಸ್ಪೆಷಲೈಝೇಷನ್ ಆಯ್ದುಕೊಳ್ಳುವ ಅಧಿಕಾರವಿತ್ತು. ಆದರೆ ಮಂಗಳೂರು ವಿವಿ ವ್ಯಾಪ್ತಿಯ ಸರಕಾರಿ ಎಮಎಸ್‌ಡಬ್ಲ್ಯೂ ತರಗತಿಗಳಿರುವ ಕಾಲೇಜುಗಳಿಗೆ, ಜಂಟಿ ನಿರ್ದೇಶಕರು 15 ವಿದ್ಯಾರ್ಥಿಗಳು ಇದ್ದರೆ ಮಾತ್ರ ಸ್ಪೆಷಲೈಜೇಷನ್ ನೀಡುವಂತೆ ವಿಡಿಯೋಕಾನ್ಫರೆನ್ಸ್ ಮೂಲಕ ಆದೇಶ ನೀಡಿದ್ದಾರೆ ಎಂದು ಆರೋಪಿಸಿ, ವಿಚಲಿತರಾದ ವಿದ್ಯಾರ್ಥಿಗಳು ಜನಪ್ರತಿನಿದಿಗಳ ಬಳಿ ತಮ್ಮ ಅಳಲನ್ನು ತೋಡಿಕೊಂಡಿದ್ದರು. ಆದರೆ ಯಾವುದೇ ಸ್ಪಂಧನೆದೊರಕದೇ ಇದ್ದಾಗ ಕೆಲವು ವಿದ್ಯಾರ್ಥಿಗಳು ಪತ್ರಿಕಾಗೋಷ್ಠಿ ನಡೆಸಿ ತಮ್ಮ ಅಳಲು ತೋಡಿಕೊಂಡಿರುವಘಟನೆಯೂ ನಡೆದಿದೆ. ನಂತರ ನಗರದ ಮಿನಿ ವಿಧಾನಸೌದ ಈ ವರ್ಷ ಕನಿಷ್ಠ 15 ವಿದ್ಯಾರ್ಥಿಗಳು ಇದ್ದರೆ ಮಾತ್ರ ಕಲಿಸಲಾಗುವುದು ಎಂದು ಜಂಟಿ ನಿರ್ದೇಶಕರು ಆದೇಶ ಹೊರಡಿಸಿದ್ದಾರೆ ಎಂದು ಆರೋಪಿಸಿ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದ್ದರು. ಆ ಸಂದರ್ಭದಲ್ಲಿ ಶಿಕ್ಷಣ ಇಲಾಖೆಯ ದೇವಿಪ್ರಸಾದ್ ಮನವಿ ಸ್ವೀಕರಿಸಿದ್ದರು ಮತ್ತು ಇಲಾಖೆ ಪರವಾಗಿ ಜಯಕರ ಭಂಡಾರಿ ಉಪಸ್ಥಿತರಿದ್ದರು . ಎಂಎಸ್ ಡಬ್ಲ್ಯು, ಸ್ನಾತಕೋತ್ತರ ಪದವಿಯ ಎರಡನೇ ವರ್ಷದಲ್ಲಿ ಮೂರು ಸ್ಪೆಷಲೈಜೇಷನ್‌ಗೆ ವಿದ್ಯಾರ್ಥಿಗಳ ಸಂಖ್ಯೆಗೆ ಸಂಬಂಧಿಸಿ ಇದ್ದ ನಿರ್ಬಂಧವನ್ನು ಸಡಿಲಿಸಲಾಗಿದೆ ಎಂದು ಕಾಲೇಜು ಶಿಕ್ಷಣ ಇಲಾಖೆಯಜಂಟಿ ನಿರ್ದೇಶಕ ರಾಮೇಗೌಡ ತಿಳಿಸಿದ್ದಾರೆ. ಆದರೆ ನಿರ್ಧಾರವನ್ನು ಎರಡು ದಿನದಲ್ಲಿ ಲಿಖಿತರೂಪದಲ್ಲಿ ಪ್ರಕಟಿಸದೇಇದ್ದರೆ ಹೋರಾಟ ತೀವ್ರಗೊಳಿಸಲಾಗುವುದು ಎಂದು ವಿದ್ಯಾರ್ಥಿಗಳು ಎಚ್ಚರಿಕೆ ನೀಡಿದ್ದಾರೆ.

## ಚಿತ್ರಾಪುರದಲ್ಲಿ ಕೋಟಿ ಗಾಯತ್ರಿ ಜಪ ಯಾಗ

ಒಂದನೇ ಪುಟದಿಂದ......

ಭೇದ ಮರೆತು ಬ್ರಾಹ್ಮಣರ ಐಕಮತ್ಯದ ಸಂಘಟನೆ ವಿಸ್ತರಿಸಿ ಸ್ವಷ್ಟ, ಸದೃಢ ಸಾಮರಸ್ಯದ ಮಾತು. ಶಾಂತಿ, ನೆಮ್ಮದಿಯ ವಿಶ್ವಗುರು ರಾಷ್ಟ್ರ ಸ್ಥಾಪನೆಯ ಗುರಿಯೊಂದಿಗೆ ಗಾಯತ್ರಿ ಸಂಗಮ ಕೈಗೊಳ್ಳಲಾಗಿದೆ ಎಂದರು. ಕರಾವಳಿ ಸೇರಿದಂತೆ ದೇಶ ವಿದೇಶದಲ್ಲಿ ನೆಲೆಸಿರುವ ದಕ್ಷಿಣ ಕನ್ನಡ ಜಿಲ್ಲೆಯ ಬ್ರಾಹ್ಮಣರು ಉಪಕರ್ಮದ ದಿನದಂದು ಸಂಕಲ್ಪ ದೀಕ್ಷೆ ತೆಗೆದುಕೊಂಡು ಗಾಯತ್ರಿ ಪಠಣ ಹಾಗೂ ಮಾತೆಯರು ಸರ್ದಮಂಗಲ ಮಾಂಗಲ್ಯ ಮಂತ್ರ ಪಠಣ ಆರಂಭಿಸಿದ್ದಾರೆ. ಎರಡು ತಿಂಗಳ ಅವಧಿಯಲ್ಲಿ ಈಗಾಗಲೇ ಕೋಟಿ ಸಂಖ್ಯೆಯಲ್ಲಿ ಗಾಯತ್ರಿ ಹಾಗೂ ಸರ್ವಮಂಗಲ ಮಂತ್ರ ಪಠಣವಾಗಿದೆ. ಇದರಯಜ್ಞ ಪ್ರಕ್ರಿಯೆ ಅ.26, 27 ರಂದು ನಡೆಯಲಿದ್ದು, ಸುಮಾರು 10 ಸಾವಿರಜನರು ಭಾಗವಹಿಸುವ ನಿರೀಕ್ಷೆ ಇದ್ದು, ಶ್ರೀ ಕ್ಷೇತ್ರ ಚಿತ್ರಾಪುರದ ತಂತ್ರಿಗಳಾದ ಬ್ರಹ್ಮಶ್ರೀ ಕುಡುಪು ನರಸಿಂಹ ತಂತ್ರಿಗಳ ಮಾರ್ಗದರ್ಶನದಲ್ಲಿ ವೇದಮೂರ್ತಿ ಕೃಷ್ಣರಾಜ ತಂತ್ರಿಗಳ ನೇತೃತ್ವದಲ್ಲಿ ಗಾಯತ್ರಿಯಜ್ಞ ನಡೆಯಲಿದೆ. ಹವ್ಯಕ, ಕೋಟ, ಕೋಟೇಶ್ವರ, ಕರ್ಹಾಡ, ಚಿತ್ಪಾವನ, ದೇಶಸ್ಥ, ಶಿವಳ್ಳಿ, ಸ್ಥಾನಿಕ ಅಲ್ಲದೆ ಬ್ರಾಹ್ಮಣ ಸಮಾಜದ ಎಲ್ಲ ಋತ್ವಿಜರು ಈ ಯಾಗದಲ್ಲಿ ಭಾಗವಹಿಸಿ ಪೂರ್ಣಾಹುತಿ ಪ್ರಕ್ರಿಯೆ ನಡೆಸಿಕೊಡಲಿದ್ದಾರೆ ಎಂದರು.

## ಬಿಜೆಪಿ ಅಭ್ಯರ್ಥಿ ಕಿಶೋರ್ ಕುಮಾರ್‌ಗೆ ಜಯ

ಒಂದನೇ ಪುಟದಿಂದ......

ಗಳಿಸಿದ್ದಾರೆ. ಈ ಕ್ಷೇತ್ರದಲ್ಲಿಒಟ್ಟು 6032 ಮತದಾರರಿದ್ದು, 5907, ಮತದಾರರ ಮತಚಲಾವಣೆಯಾಗಿದ್ದು, 5817 ಸಿಂಧು ಮತಗಳಿದ್ದರೆ, 90 ಮತಗಳು ಅಸಿಂಧುವಾಗಿದೆ. ಲೋಕಸಭಾ ಸದಸ್ಯರಾಗಿ ಆಯ್ಕೆಯಾದ ಕೋಟ ಶ್ರೀನಿವಾಸ ಪೂಜಾರಿ ಅವರು ವಿಧಾನ ಪರಿಷತ್ ಸದಸ್ಯ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು, ಈ ಹಿನ್ನೆಲೆಯಲ್ಲಿ ಉಪ ಚುನಾವಣೆ ನಡೆದಿದೆ. 2024ರ ಅ.21ರಂದು ಮತದಾನ ನಡೆದಿತ್ತು ದ.ಕ, ಉಡುಪಿ ಜಿಲ್ಲೆಯ ಮತದಾನ ಕೇಂದ್ರಗಳಲ್ಲಿ ನಡೆದಿದೆ. 2021 ರಡಿಸೆಂಬರ್ 10 ರಂದು ಈ ಕ್ಷೇತ್ರಕ್ಕೆ ನಡೆದ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಕೋಟ ಶ್ರೀನಿವಾಸ ಪೂಜಾರಿ, 3672, ಮಂಜುನಾಥ ಭಂಡಾರಿ 2079, ಎಸ್ಡಿಪಿಐ ಅಭ್ಯರ್ಥಿ 204 ಮತ ಪಡೆದಿದ್ದರು. ಕೋಟ ಶ್ರೀನಿವಾಸ ಪೂಜಾರಿ 1593 ಮತಗಳ ಅಂತರದಿಂದ ಜಯಗಳಿಸಿದ್ದರು. 6,012 ಮತ ಚಲಾವಣೆಯಾಗಿದ್ದು, 5,955 ಮತಗಳು ಸಿಂಧುವಾಗಿದ್ದವು.

## ಮೀನು ಮಾರಾಟಗಾರರಿಂದ ಅರ್ಜಿ ಆಹ್ವಾನ

ಮಂಗಳೂರು – ಸ್ಥಳೀಯವಾಗಿ ಮೀನು ಸೇವನೆಯನ್ನು ಪ್ರೋತ್ಸಾಹಿಸಲು ಹಾಗೂ ತಾಜಾ ಮೀನು ಮತ್ತು ಮೀನು ಉತ್ಪನ್ನಗಳ ಮಾರಾಟಕ್ಕಾಗಿ "ಮತ್ಸ್ಯವಾಹಿನಿ" ಯೋಜನೆಯಡಿ ತ್ರಿಚಕ್ರ ವಾಹನಗಳನ್ನು ಪರವಾನಿಗೆ ಆಧಾರದಲ್ಲಿ ಪಡೆಯಲು ಆಸಕ್ತ ಮೀನು ಮಾರಾಟಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ದಕ್ಷಿಣ ಕನ್ನಡ ಜಿಲ್ಲೆಗೆ ಒಟ್ಟು 10 ವಾಹನಗಳನ್ನು ನೀಡುವ ಗುರಿ ಇದೆ. ಆಯ್ಕೆಯಾಗುವ ಸಾಮಾನ್ಯ ವರ್ಗದ ಅರ್ಜಿದಾರರು ಇಲಾಖೆಗೆ ಭದ್ರತಾ ಠೇವಣಿಯಾಗಿ ರೂ 1 ಲಕ್ಷ ಹಾಗೂ ಪರಿಶಿಷ್ಟ ಜಾತಿ/ಪಂಗಡ/ಮಹಿಳೆಯರು ರೂ. 50 ಸಾವಿರ ನೀಡಬೇಕು ಹಾಗೂ ಮಾಸಿಕ ರೂ. 3,000/– ಬಾಡಿಗೆ ಮೊತ್ತವನ್ನು ಪಾವತಿಸಬೇಕು. ಅರ್ಜಿ ಸಲ್ಲಿಸಲು ನವೆಂಬರ್ 15 ಕೊನೆಯ ದಿನ.

## ಐಟಿಐ ಖಾಲಿ ಸೀಟುಗಳಿಗೆ ಅರ್ಜಿ ಆಹ್ವಾನ

ಮಂಗಳೂರು – ನಗರದ ಸರ್ಕಾರಿ ಐ.ಟಿ.ಐ, ಮಹಿಳಾ ಸಂಸ್ಥೆಯಲ್ಲಿ ಎಸ್.ಎಸ್.ಎಲ್.ಸಿ ಪಾಸಾದ ಅಭ್ಯರ್ಥಿಗಳಿಗೆ ತರಬೇತಿ ಪಡೆಯಲು ಸೀಟುಗಳು ಖಾಲಿಯಿದ್ದು, ಕರ್ನಾಟಕದಲ್ಲಿ 5 ವರ್ಷ ವ್ಯಾಸಂಗ ಮಾಡಿರುವ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳಿಂದ ಅಕ್ಟೋಬರ್ 30ರೊಳಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ವಾಹಿತಿಗೆ : 9880119147/ 9448858417 ಸಂಪರ್ಕಿಸುವಂತೆ ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಪತ್ತು ನಿಯಂತ್ರಣ ಅನುದಾನ ಬಳಕೆಗೆ ಯೋಜನೆ

ಮಂಗಳೂರು – ರಾಜ್ಯ ವಿಪತ್ತು ತಗ್ಗಿಸುವಿಕೆ ಅನುದಾನದಿಂದ ಜಿಲ್ಲೆಯಲ್ಲಿ ಪದೇ ಪದೇ ಸಂಭವಿಸುವ ಪ್ರಾಕೃತಿಕ ವಿಕೋಪ ಅನಾಹುತಗಳನ್ನು ಗುರುತಿಸಿ ಅವುಗಳ ಅಪಾಯ ತಗ್ಗಿಸಲು ಅಗತ್ಯ ಯೋಜನೆಗಳನ್ನು ತಯಾರಿಸಿ ಪ್ರಸ್ತಾವನೆ ಸಲ್ಲಿಸುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ. ಆನಂದ್ ಕೆ. ತಿಳಿಸಿದ್ದಾರೆ. ರಕ್ಷಣಾತ್ಮಕ ಕ್ರಮಗಳನ್ನು ಕೈಗೊಂಡು ಸಂಭಾವ್ಯ ಪ್ರಾಕೃತಿಕ ಅಪಾಯಗಳನ್ನು ತಡೆಗಟ್ಟುವುದು ಹಾಗೂ ಅಗತ್ಯ ಕ್ರಮಗಳನ್ನು ಜಾರಿಗೊಳಿಸಬೇಕಾಗಿದೆ ಎಂದು ಅವರು ಸೂಚಿಸಿದರು.

## ಯುವ ಸಮಾಲೋಚಕರ ಹುದ್ದೆಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಜನ ಆರೋಗ್ಯ ಕೇಂದ್ರ, ಎಪಿಡಿಮಿಯಾಲಜಿ ವಿಭಾಗ, ನಿಮ್ಹಾನ್ಸ್ ಬೆಂಗಳೂರು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಯುವ ಸ್ಪಂದನ ಕಾರ್ಯಕ್ರಮದ ಅಡಿಯಲ್ಲಿ ಕಾರ್ಯ ನಿರ್ವಹಿಸಲು ಯುವ ಪರಿವರ್ತಕರು ಮತ್ತು ಯುವ ಸಮಾಲೋಚಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ವಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಕ್ರೀಡಾಂಗಣ, ಶಿವಮೊಗ್ಗ ಇಲ್ಲಿ ಸಂಪರ್ಕಿಬಹುದು ಎಂದು ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಾಯಧನ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಶಿವಮೊಗ್ಗ : ಮೀನುಗಾರಿಕೆ ಇಲಾಖೆ ವತಿಯಿಂದ 2022–23ರಿಂದ 2024–25ನೇ ಸಾಲಿನವರೆಗೆ ಮರು ಹಂಚಿಕೆಯಾಗಿರುವ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಮತ್ತು ನೀಲಿಕ್ರಾಂತಿ ಯೋಜನೆಯಡಿ ವಿವಿಧ ಘಟಕಗಳಿಗೆ ಸಹಾಯಧನ ಸೌಲಭ್ಯ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ನ.05 ರೊಳಗೆ ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಯಿಂದ ಅರ್ಜಿಗಳನ್ನು ಪಡೆದು ಸಂಬಂಧಪಟ್ಟ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಪೂರ್ಣ ದಾಖಲೆಗಳೊಂದಿಗೆ ಸಲ್ಲಿಸಬಹುದೆಂದು ಮೀನುಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

## ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಮಡಿಕೇರಿ–2024–25ನೇ ಸಾಲಿನಲ್ಲಿ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಪರಿಶಿಷ್ಟ ಪಂಗಡ ಜನಾಂಗದವರ ಆರ್ಥಿಕ ಅಭಿವೃದ್ಧಿ ಸಂಬಂಧ ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ ಮೈಕ್ರೋ ಕ್ರೆಡಿಟ್ ಯೋಜನೆ (ನೋಂದಾಯಿತ ಸ್ವ–ಸಹಾಯ ಮಹಿಳಾ ಸಂಘಗಳು), ಗಂಗಾ ಕಲ್ಯಾಣ ಯೋಜನೆಗಳಡಿ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ವೆಬ್‌ಸೈಟ್ ವಿಳಾಸ https://sevasindhus ervic es.karnataka.gov.inನಲ್ಲಿ ಸಲ್ಲಿಸಬಹುದು. ಯೋಜನೆಗಳ ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯಿಂದ ಅಥವಾ ನಿಗಮದ ವೆಬ್‌ಸೈಟ್ https://kmvstdel.karnataka.gov.in ಮೂಲಕ ಪಡೆದುಕೊಳ್ಳುವುದು.

## ಜೇನುಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

ಮಡಿಕೇರಿ –ಭಾಗಮಂಡಲ ಜೇನುಗಾರಿಕೆ ತರಬೇತಿ ಕೇಂದ್ರದಲ್ಲಿ 2024–25ನೇ ಸಾಲಿನಲ್ಲಿ ರೈತರ ಮಕ್ಕಳಿಗೆ 3 ತಿಂಗಳ ಜೇನುಗಾರಿಕೆ ತರಬೇತಿ ಕಾರ್ಯಕ್ರಮವನ್ನು 2024ರ ನವೆಂಬರ್, 05ರಿಂದ 2025ರ ಫೆಬ್ರವರಿ, 04ರವರೆಗೆ (ಪುರುಷ ಅಭ್ಯರ್ಥಿಗಳು ಮಾತ್ರ) ಹಮ್ಮಿಕೊಳ್ಳಲಾಗುವುದು. ಈ ಸಂಬಂಧ ಕೊಡಗು ಜಿಲ್ಲೆಯಿಂದ 18ರಿಂದ 35 ವರ್ಷ ವಯಸ್ಸಿನೊಳಗಿನ ಒಂದು ಅಭ್ಯರ್ಥಿಯನ್ನು ಆಯ್ಕೆ ಮಾಡಲು ಅವಕಾಶವಿದ್ದು (ಇತರೆ–1) ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

## ಇಂದ್ರಾಳಿ ಸೇತುವೆ ಪೂರ್ಣಗೊಳಿಸುವ ಬಗ್ಗೆ ಮುಚ್ಚಳಿಕೆ



ಉಡುಪಿ: ಇಂದ್ರಾಳಿ ಸೇತುವೆ ನಿರ್ಮಾಣಕ್ಕೆ ಸಂಬಂಧಿಸಿ ಎಲ್ಲ ಸಲಕರಣೆಗಳು ಬಂದಿದ್ದು, ಈಗಾಗಲೇ ವಿಳಂಬವಾಗಿರುವುದರಿಂದ ಈ ಕಾಮಗಾರಿಯನ್ನು ಜ.15ರೊಳಗೆ ಪೂರ್ಣಗೊಳಿಸುವ ಬಗ್ಗೆ ಗುತ್ತಿಗೆದಾರರಿಂದ ಉಡುಪಿ ಸಂಚಾರ ಪೊಲೀಸ್ ಠಾಣೆಯಲ್ಲಿ ಮುಚ್ಚಳಿಕೆ ಮಾಡಿಕೊಳ್ಳಲಾಗಿದೆ ಎಂದು ಉಡುಪಿ–ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ ತಿಳಿಸಿದ್ದಾರೆ. ಇಂದ್ರಾಳಿ ರೈಲ್ವೆ ಸೇತುವೆ ಕಾಮಗಾರಿಯನ್ನು ವೀಕ್ಷಿಸಿದ ಬಳಿಕ ಅವರು ಮಾಧ್ಯಮದವರೊಂದಿಗೆ ಮಾತನಾಡಿ, ಇಂದ್ರಾಳಿ ಸೇತುವೆ ಕಾಮಗಾರಿ ವಿಳಂಬದಿಂದಾಗಿ ಅಪಘಾತಗಳು ಸಂಭವಿಸುತ್ತಿರುವುದು ಗಮನಕ್ಕೆ ಬಂದಿದೆ. ಈ ಕುರಿತ ಟೀಕೆ ಟಿಪ್ಪಣಿಗಳನ್ನು ಗಮನಿಸುತ್ತಿದ್ದೇವೆ ಎಂದರು. ಸೇತುವೆ ಕಾಮಗಾರಿ ಸಂಬಂಧ ಹಲವು ಬಾರಿ ಅಧಿಕಾರಿಗಳ ಸಭೆ ಕರೆದಿದ್ದೇನೆ. ಅದೇ ರೀತಿ ಡಿಸಿ ಎಸ್ಪಿಯವರ ಸಮಕ್ಷಮದಲ್ಲಿಯೂ ಸಭೆ ನಡೆಸಿ, ಜ.15ರೊಳಗೆ ವಾಹನ ಸಂಚಾರಕ್ಕೆ ಮುಕ್ತಗೊಳಿಸುವ ಬಗ್ಗೆ ನಿರ್ಧಾರ ತೆಗೆದುಕೊಳ್ಳಲಾಗಿದೆ. ಈ ಸಂಬಂಧ ಪೊಲೀಸ್ ಠಾಣೆಯಲ್ಲಿ ಗುತ್ತಿಗೆದಾರರಿಂದ ಮುಚ್ಚಳಿಕೆ ಬರೆಸಿಕೊಳ್ಳಲಾಗಿದೆ ಎಂದು ಅವರು ಮಾಹಿತಿ ನೀಡಿದರು.

## ಕಾಲುಬಾಯಿ ರೋಗದಿಂದ ಮುಕ್ತಗೊಳಿಸಲು ಸಹಕರಿಸಿ–ಜಿಲ್ಲಾಧಿಕಾರಿ

ಉಡುಪಿ: ಜಿಲ್ಲೆಯ ಎಲ್ಲಾ ಹೈನುಗಾರರು ತಮ್ಮ ಜಾನುವಾರುಗಳಿಗೆ ಪ್ರತಿಶತ ನೂರರಷ್ಟು ಕಾಲುಬಾಯಿ ಜ್ವರ ರೋಗ ಲಸಿಕೆಯನ್ನು ಹಾಕಿಸುವ ಮೂಲಕ ಜಿಲ್ಲೆಯನ್ನು ಕಾಲುಬಾಯಿ ರೋಗದಿಂದ ಮುಕ್ತಗೊಳಿಸಲು ಸಹಕರಿಸುವಂತೆ ಜಿಲ್ಲಾಧಿಕಾರಿ ಡಾ.ಕೆ.ವಿದ್ಯಾಕುಮಾರಿ ಮನವಿ ಮಾಡಿದ್ದಾರೆ. ಬ್ರಹ್ಮಾವರ ಸಮೀಪದ ನೀಲಾವರ ಗೋಶಾಲೆಯಲ್ಲಿ ಕಾಲುಬಾಯಿ ರೋಗ ಲಸಿಕಾ ಅಭಿಯಾನಕ್ಕೆ ಜಿಲ್ಲೆಯಲ್ಲಿ ಸಾಂಕೇತಿಕವಾಗಿ ಚಾಲನೆ ನೀಡಿದರು. ಕಾಲುಬಾಯಿ ರೋಗವು ಜಾನುವಾರುಗಳಿಗೆ ಮಾರಣಾಂತಿಕ ಕಾಯಿಲೆ ಯಾಗಿದ್ದು, ಈ ರೋಗ ನಿಯಂತ್ರಣಕ್ಕಾಗಿ ರಾಷ್ಟ್ರೀಯ ಜಾನುವಾರು ರೋಗಗಳ ನಿಯಂತ್ರಣ ಕಾರ್ಯಕ್ರಮದಡಿ 6ನೇ ಸುತ್ತಿನ ಕಾಲುಬಾಯಿ ಲಸಿಕಾ ಕಾರ್ಯಕ್ರಮವನ್ನು ಜಿಲ್ಲೆಯಾದ್ಯಂತ ಅ.21ರಿಂದ



ನ.20ರವರೆಗೆ ಹಮ್ಮಿಕೊಳ್ಳಲಾಗುತ್ತಿದೆ ಎಂದರು. ಜಿಲ್ಲೆಯ ಎಲ್ಲಾ ಹೈನುಗಾರರು ಪಶು ಸಂಗೋಪನಾ ಇಲಾಖೆಯ ಅಧಿಕಾರಿ / ಸಿಬ್ಬಂದಿಗಳು, ಕೆಎಂಎಫ್ ಸಿಬ್ಬಂದಿಗಳು ಅಥವಾ ಗ್ರಾಮ ಮಟ್ಟದಲ್ಲಿ ಪಶು ಸಖಿಯರು ಜಾನುವಾರುಗಳಿಗೆ ಲಸಿಕೆ ನೀಡಲು ಎಲ್ಲಾ ರೀತಿಯ ಸಹಕಾರ ನೀಡಬೇಕು ಎಂದರು.

## ಪರಶುರಾಮನ ಕಂಚಿನ ಪ್ರತಿಮೆ ಅಕ್ರಮ: ಅರ್ಜಿ ವಜಾ



ಉಡುಪಿ: ಉಡುಪಿ ಜಿಲ್ಲೆಯ ಕಾರ್ಕಳ ತಾಲೂಕಿನ ಉಮಿಕಲ್ ಬೆಟ್ಟದ ಮೇಲೆ ಪರಶುರಾಮನ ಕಂಚಿನ ಪ್ರತಿಮೆ ರಚನೆಯ ಅಕ್ರಮಕ್ಕೆ ಸಂಬಂಧಿಸಿದಂತೆ ಪ್ರಕರಣ ರದ್ದು ಆರೋಪಿ ಕೃಷ್ಣ ನಾಯ್ಕ್ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿ ಆದೇಶಿದೆ. ತಮ್ಮ ವಿರುದ್ಧ ಉಡುಪಿ ಜಿಲ್ಲೆಯ ಟೌನ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ದೂರು ಹಾಗೂ ಎಫ್‌ಐಆರ್ ರದ್ದು ಕೋರಿ ಶಿಲ್ಪಿ ಕೃಷ್ಣ ನಾಯ್ಕ್ ಅರ್ಜಿಯನ್ನು ವಿಚಾರಣೆ ನಡೆಸಿದ ಕಾಯ್ದಿರಿಸಿದ್ದ ತೀರ್ಪು ಪ್ರಕಟಿಸಿದ ಹೈಕೋರ್ಟ್ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಏಕಸದಸ್ಯ ಪೀಠ ಆದೇಶ ನೀಡಿದೆ. ಮೇಲ್ನೋಟಕ್ಕೆ ಅಕ್ರಮ ಆಗಿರುವ ಬಗ್ಗೆ ಸಾಬೀತು ಆಗಿದೆ. ಪ್ರಕರಣ ಬಗ್ಗೆ ತನಿಖೆ ನಡೆಯಬೇಕು ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ. ವಿಚಾರಣೆ ವೇಳೆ ಅರ್ಜಿದಾರರ ಪರ ಹಿರಿಯ ವಕೀಲ ಅರುಣ್ ಶ್ಯಾಮ್ ವಾದ ಮಂಡಿಸಿ ಅರ್ಜಿದಾರರ ವಿರುದ್ಧ ಆಧಾರ ರಹಿತ ಆರೋಪ ಮಾಡಲಾಗಿದೆ. ರಾಜಕೀಯ ಪ್ರೇರಿತವಾಗಿ ದುರುದ್ದೇಶದಿಂದ ಅರ್ಜಿದಾರರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಹಾಗಾಗಿ ಪ್ರಕರಣ ರದ್ದುಗೊಳಿಸುವಂತೆ ಮನವಿ ಮಾಡಿದ್ದರು.

## ಕ್ಯಾ. ಚೌಟರಿಂದ ಸದಸ್ಯತ್ವ ಮರು ನೋಂದಣಿ

ಮಂಗಳೂರು: ಸಕ್ರಿಯ ಸದಸ್ಯತ್ವ ಅಭಿಯಾನದ ಭಾಗವಾಗಿ ಭಾರತೀಯ ಜನತಾ ಪಾರ್ಟಿಯ ಸಕ್ರಿಯ ಸದಸ್ಯನಾಗಿ ಕ್ಯಾ. ಬ್ರಿಜೇಶ್ ಚೌಟ ಅವರು ತಮ್ಮ ಸದಸ್ಯತ್ವವನ್ನು ಮರು ನೋಂದಣಿ ಮಾಡಿಸಿಕೊಂಡಿದ್ದಾರೆ. ಮಂಗಳೂರಿನಲ್ಲಿರುವ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಸಕ್ರಿಯ ಸದಸ್ಯತ್ವ ಅಭಿಯಾನ ಕಾರ್ಯಕ್ರಮದಲ್ಲಿ ಜಿಲ್ಲಾಧ್ಯಕ್ಷರಾದ ಸತೀಶ್ ಕುಂಪಲ ಅವರ ಸಮ್ಮುಖದಲ್ಲಿ ಕ್ಯಾ. ಚೌಟ ಅವರು ಸಕ್ರಿಯ ಸದಸ್ಯನಾಗಿ ನೋಂದಣಿ ಮಾಡಿಕೊಂಡರು. ಈ ವೇಳೆ ಮಾತನಾಡಿದ ಕ್ಯಾ. ಚೌಟ ಅವರು, ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಸಕ್ರಿಯ ಸದಸ್ಯತಾ ಅಭಿಯಾನವನ್ನು



ಪ್ರಾರಂಭಿಸುವ ಮೂಲಕ ಭಾರತೀಯ ಜನತಾ ಪಾರ್ಟಿಯ ಮೊದಲ ಸಕ್ರಿಯ ಸದಸ್ಯರಾಗಿ ತಮ್ಮ ಸದಸ್ಯತ್ವವನ್ನು ಮರು ನೋಂದಣಿ ಮಾಡಿಸಿಕೊಂಡಿದ್ದಾರೆ ಎಂದರು.

## ಕಾನೂನು ತಿದ್ದುಪಡಿ ಅಗತ್ಯ –ಡಾ.ಭಂಡಾರಿ



ಮಂಗಳೂರು: ರಾಜ್ಯದಲ್ಲಿ ಮಾದಕ ಪದಾರ್ಥಗಳ ಮಾರಾಟ ಜಾಲ ನಿಯಂತ್ರಿಸಲು ಸೂಕ್ತ ಕಾನೂನು ತಿದ್ದುಪಡಿ ಮಾಡಲು ವಿಧಾನ ಪರಿಷತ್ತಿನಲ್ಲಿ ಪ್ರಸ್ತಾಪಿಸುವುದಾಗಿ ವಿಧಾನ ಪರಿಷತ್ ಸದಸ್ಯ ಮಂಜುನಾಥ ಭಂಡಾರಿ ತಿಳಿಸಿದ್ದಾರೆ. ಈಗಾಗಲೇ ರಾಜ್ಯದಲ್ಲಿ ಮಾದಕ ವಸ್ತುಗಳನ್ನು ಪೊಲೀಸರು ವಶಪಡಿಸಿಕೊಂಡ ಬಗ್ಗೆ ಮಾಧ್ಯಮಗಳ ವರದಿಗಳ ಆಧಾರದಲ್ಲಿ ರಾಜ್ಯ ಗೃಹ ಸಚಿವರಿಗೆ ಸೂಕ್ತ ಕ್ರಮ ಕೈಗೊಳ್ಳುವ ಅಗತ್ಯವಿದೆ ಎಂದು ಪತ್ರ ಬರೆದಿರುವುದಾಗಿ ಹೇಳಿದರು. ಹಾಲಿ ಇರುವ ಕಾಯಿದೆಯಿಂದ ಮಾದಕ ವಸ್ತುಗಳ ಸಾಗಾಟ ಮತ್ತು ಮಾರಾಟ ಮಾಡುವ ಜಾಲದಲ್ಲಿ ತೊಡಗಿರುವವರು ಪೊಲೀಸರ ಕೈಗೆ ಸಿಕ್ಕಿ ಬಿದ್ದರೂ ಕಠಿಣ ಶಿಕ್ಷೆ ಇಲ್ಲದೆ ಮತ್ತೆ ಅದೇ ದಂಧೆಯಲ್ಲಿ ತೊಡಗುತ್ತಿರುವ ಕಾರಣ ಇವರನ್ನು ನಿಯಂತ್ರಿಸಲು ಕಠಿಣ ಕಾಯಿದೆಯ ಅಗತ್ಯವಿದೆ ಎಂದು ಡಾ.ಮಂಜುನಾಥ ಭಂಡಾರಿ ತಿಳಿಸಿದ್ದಾರೆ.

## ಹೆಬ್ಬಾಳ್ಕರ್‌ಗೆ ನೈತಿಕತೆ ಇಲ್ಲ: ಶ್ರೀನಿಧಿ ಹೆಗ್ಡೆ

ಉಡುಪಿ: ಜಿಲ್ಲಾ ಉಸ್ತುವಾರಿ ಸಚಿವರಾಗಿ ತಿಂಗಳಿಗೆ ಒಂದು ಬಾರಿಯಾದರೂ ಜಿಲ್ಲೆಗೆ ಭೇಟಿ ನೀಡದ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಬಿಜೆಪಿ ನಾಯಕಿ ಶೋಭಾ ಕರಂದ್ಲಾಜೆ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ. ಮುಡಾ ಹಗರಣದ ಕುರಿತು ಮಾತನಾಡಿರುವ ಶೋಭಾ ಕರಂದ್ಲಾಜೆ ಕುರಿತು ಮಾತನಾಡುವ ಯಾವ ನೈತಿಕತೆ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಇದೆ ಎಂದು ಬಿಜೆಪಿ ಮುಖಂಡ ಶ್ರೀನಿಧಿ ಹೆಗ್ಡೆ ಪ್ರಶ್ನಿಸಿದ್ದಾರೆ. ಲಕ್ಷ್ಮೀ ಹೆಬ್ಬಾಳ್ಕರ್ ತಮ್ಮ ಇಲಾಖೆಯಲ್ಲಿ ಗೃಹಲಕ್ಷ್ಮಿ ಹಣವನ್ನು ಪ್ರತಿ ಮನೆಗೂ ತಲುಪಿಸುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ. ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾಗಿ ಜಿಲ್ಲೆಗೆ ಹೇಳಿಕೊಳ್ಳುವಂಥ ಅನುದಾನ ತಾರದೆ ಜಿಲ್ಲೆಯಲ್ಲಿ ಕಾಂಗ್ರೆಸ್ ಶಾಸಕರು ಇಲ್ಲದೆ ಇರುವ ಕಾರಣ ಮಲತಾಯಿ ಧೋರಣೆ



ತೋರಿರುವುದು ಜಿಲ್ಲೆಯ ಜನರಿಗೆ ತಿಳಿದಿರುವ ಸಂಗತಿಯಾಗಿದೆ. ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಸೋಲು ಕಟ್ಟಿಟ್ಟ ಬುತ್ತಿ ಎಂಬುದನ್ನು ಮನಗಂಡಿರುವ ಲಕ್ಷ್ಮೀ ಹೆಬ್ಬಾಳ್ಕರ್ ಹತಾಷ ಮನೋಭಾವದಿಂದ ಈ ರೀತಿ ವರ್ತಿಸುತ್ತಿದ್ದಾರೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಾಲಿಕೆ ವಿರುದ್ಧ ಬೀದಿಬದಿ ವ್ಯಾಪಾರಿಗಳ ಪ್ರತಿಭಟನೆ



ಸುರತ್ಕಲ್: ನಗರಪಾಲಿಕೆಗೆ ಸೇರದ ರಾಷ್ಟ್ರೀಯ ಹೆದ್ದಾರಿ ಜಾಗವನ್ನು ಕಾನೂನು ಬಾಹಿರವಾಗಿ ಏಲಮ್ ಮಾಡಿ ಬಡ ಬೀದಿಬದಿ ವ್ಯಾಪಾರಿಗಳನ್ನು ಅಮಾನುಷವಾಗಿ ಬುಲ್ಡೋಜರ್ ಬಳಸಿ ಎಬ್ಬಿಸಲಾಗಿದೆ ಎಂದು ಆರೋಪಿಸಿ ದಕ್ಷಿಣ ಕನ್ನಡ ಜಿಲ್ಲಾ ಬೀದಿಬದಿ ವ್ಯಾಪಾರಸ್ಥರ ಸಂಘದ ಬೈಕಂಪಾಡಿ ಘಟಕದ ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು. ಪ್ರತಿಭಟನೆಯನ್ನು ಉದ್ದೇಶಿಸಿ ಸಂಘದ ಗೌರವಾಧ್ಯಕ್ಷ ಬಿಕೆ ಇಮ್ತಿಯಾಜ್ ಮಾತನಾಡುತ್ತಾ ನಗರಪಾಲಿಕೆ ಅಧಿಕಾರಿಗಳು ಕಾನೂನು ಬಾಹಿರವಾಗಿ ಧಾಳಿ ನಡೆಸಿ ಬಡ ಬೀದಿ ವ್ಯಾಪಾರಿಗಳಿಗೆ ಅನ್ಯಾಯ ಮಾಡಿದೆ. ಮತ್ತೊಂದೆಡೆ ಪಾಲಿಕೆಗೆ ಸೇರದ ಜಾಗವನ್ನು, ಪಟಾಕಿ ಮಾರಾಟ ಮಾಡಲು ಸುರಕ್ಷಿತವಲ್ಲದ ಪೆಟ್ರೋಲಿಯಂ ಮತ್ತು ಗ್ಯಾಸ್ ಕಂಪೆನಿಗಳ ಪೆಟ್ರೋಲ್ ಮತ್ತು ಗ್ಯಾಸ್ ಪೈಪ್ ಲೈನ್ ಹಾದು ಹೋಗಿರುವ ಜಾಗದಲ್ಲಿ ಪಟಾಕಿ ಮಾರಾಟ ಮಳಿಗೆಗೆ ಅವಕಾಶ ನೀಡಿ ಅನಾಹುತಕ್ಕೆ ದಾರಿ ಮಾಡಿಕೊಟ್ಟಿದೆ. ಮಾರುಕಟ್ಟೆ , ಜನನಿಬಿಡ ಪ್ರದೇಶದಿಂದ ದೂರ ಇರಬೇಕಿದ್ದ ಸುಡು ಮದ್ದು ಮಾರಾಟವನ್ನು ಜನಸಂದಣಿಯ ನಡುವೆ ತಂದು ಹಾಕಿರುವುದು ವಿಪರ್ಯಾಸ ಎಂದು ಟೀಕಿಸಿದರು

## ಹಳಿಗಳ ಮೇಲೆ ಕಲ್ಲು: ಗಂಭೀರವಾಗಿ ಪರಿಗಣಿಸಬೇಕು–ಕಾಮತ್

ಮಂಗಳೂರು–ಕೇರಳ ನಡುವಿನ ರೈಲು ಮಾರ್ಗದ ಹಳಿಗಳ ಮೇಲೆ ತೊಕ್ಕೊಟ್ಟು ಬಳಿ ಆಗಂತುಕರು ಹಲವು ಕಲ್ಲುಗಳನ್ನಿಟ್ಟು ರೈಲು ಬೀಳಿಸಲು ನಡೆಸಿರುವ ಷಡ್ಯಂತ್ರವು ತೀವ್ರ ಕಳವಳಕಾರಿಯಾಗಿದ್ದು ರಾಜ್ಯ ಕಾಂಗ್ರೆಸ್ ಸರ್ಕಾರ ಹಾಗೂ ಪೊಲೀಸ್ ಇಲಾಖೆ ಗಂಭೀರವಾಗಿ ಪರಿಗಣಿಸಬೇಕೆಂದು ಶಾಸಕ ವೇದವ್ಯಾಸ ಕಾಮತ್ ರವರು ಆಗ್ರಹಿಸಿದರು. ಹಳಿಗಳ ಮೇಲಿಟ್ಟಿದ್ದ ಕಲ್ಲುಗಳ ಮೇಲೆಯೇ ರೈಲು ಸಾಗಿದ ರಭಸಕ್ಕೆ ದೊಡ್ಡ ಪ್ರಮಾಣದ ಕಂಪನವುಂಟಾಗಿ ಸ್ಥಳೀಯ ನಿವಾಸಿಗಳಿಗೆ ರೈಲು ಬಿದ್ದ ಅನುಭವವಾಗಿದೆ. ಕೂಡಲೇ ಪರಿಶೀಲನೆ ಮಾಡಿದಾಗ ಹಳಿಯ ಮೇಲೆ ಸುರಿದಿದ್ದ ಹಲವು ಕಲ್ಲುಗಳು ಪುಡಿಪುಡಿಯಾಗಿ ಬಿದ್ದಿದ್ದವು ಎಂದು ಸ್ಥಳೀಯರು ತಿಳಿಸಿದ್ದಾರೆ.



ಒಂದಷ್ಟು ತಿಂಗಳುಗಳ ಹಿಂದೆ ಪಕ್ಕದ ಕಾಸರಗೋಡಿನ ಅಲ್ಲಲ್ಲಿ, ಹಳಿ ಮೇಲೆ ಕಲ್ಲು, ಕಬ್ಬಿಣದ ಸರಳು, ಕಾಂಕ್ರೀಟ್ ತುಂಡುಗಳನ್ನಿರಿಸಿ ರೈಲು ಹಳಿ ತಪ್ಪಿಸುವ ವಿಧ್ವಂಸಕ ಕೃತ್ಯ ನಡೆಸಲಾಗಿತ್ತು. ಇದೀಗ ಮಂಗಳೂರಿನಲ್ಲೂ ಇಂತಹ ದುಷ್ಕೃತ್ಯ ಆರಂಭವಾಗಿದ್ದು ಸ್ಥಳೀಯವಾಗಿ ಆತಂಕಕಾರಿ ವಾತಾವರಣ ಸೃಷ್ಟಿಯಾಗಿದೆ ಎಂದು ಶಾಸಕರು ಕಳವಳ ವ್ಯಕ್ತಪಡಿಸಿದರು.

## ಪುತ್ತೂರು ವಿಧಾನಸಭಾ ಕ್ಷೇತ್ರಕ್ಕೆ ಇನ್ನೂ ಬರಲಿದೆ ಅನುದಾನ



ಪುತ್ತೂರು: 2024–25ನೇ ಸಾಲಿನಲ್ಲಿ ಕಳೆದ ಎಪ್ರಿಲ್‌ನಿಂದಿಚೆಗೆ ಪುತ್ತೂರು ವಿಧಾನಸಭಾ ಕ್ಷೇತ್ರಕ್ಕೆ ರಾಜ್ಯ ಸರಕಾರದಿಂದ ರೂ. 79 ಕೋಟಿ ಅನುದಾನ ಬಿಡುಗಡೆಯಾಗಿದೆ. ಮುಂದಿನ ದಿನಗಳಲ್ಲಿ ಇನ್ನೂ 65 ಕೋಟಿ ರೂ. ಅನುದಾನ ಬರಲಿದೆ ಎಂದು ಪುತ್ತೂರು ಶಾಸಕ ಅಶೋಕ್ ಕುಮಾರ್ ರೈ ತಿಳಿಸಿದ್ದಾರೆ. ಈ ವರ್ಷದ ಆರಂಭದಿಂದ ಸಂಸದೀಯ ಚುನಾವಣೆ, ವಿಧಾನ ಪರಿಷತ್ ಚುನಾವಣೆ ನೀತಿ ಸಂಹಿತೆಗಳ ಕಾರಣದಿಂದ ಅನೇಕ ತಿಂಗಳುಗಳ ಕಾಲ ಯಾವುದೇ ಅಭಿವೃದ್ಧಿ ಕಾಮಗಾರಿ ನಡೆಸಲು ಸಾಧ್ಯವಾಗಲಿಲ್ಲ. ಮುಂದಿನ ದಿನಗಳಲ್ಲಿ ಒಂದೊಂದೇ ಕಾಮಗಾರಿಗಳ ಶಂಕುಸ್ಥಾಪನೆ ನಡೆಯಲಿದೆ ಪುತ್ತೂರಿನಲ್ಲಿ ನೂತನ ಸಿಂಥೆಟಿಕ್ ಟ್ರಾಕ್‌ನ ಸುಸಜ್ಜಿತ ತಾಲೂಕು ಕ್ರೀಡಾಂಗಣ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗಿದೆ. ಈಗಿರುವ ಕೊಂಬೆಟ್ಟು ತಾಲೂಕು ಕ್ರೀಡಾಂಗಣವನ್ನು ವಿಸ್ತರಿಸಲು ಅವಕಾಶವಿಲ್ಲ. ಈ ಹಿನ್ನಲೆಯಲ್ಲಿ ನೂತನ ತಾಲೂಕು ಕ್ರೀಡಾಂಗಣ ನಿರ್ಮಾಣಕ್ಕಾಗಿ ನಗರದ ಹೊರವಲಯದ ಮುಂಡೂರು ಪ್ರದೇಶದಲ್ಲಿ 20 ಎಕ್ರೆ ಜಾಗವನ್ನು ಗುರುತಿಸಲಾಗಿದೆ. ಮುಂದಿನ ದಿನಗಳಲ್ಲಿ ಅದನ್ನು ತಾಲೂಕು ಕ್ರೀಡಾಂಗಣದ ಹೆಸರಿಗೆ ನೋಂದಾಯಿಸುವ ಕಾರ್ಯ ಮಾಡಲಾಗುವುದು ಎಂದರು.

## ಬೆಂಗಳೂರು ಕಂಬಳ ವಿರುದ್ಧ ಪೇಟಾ ರಿಟ್ ಅರ್ಜಿ!

ಪುತ್ತೂರು: ಬೆಂಗಳೂರಿನಲ್ಲಿ ಕಂಬಳ ನಡೆಸಲು ಅವಕಾಶ ನೀಡಬಾರದು ಎಂದು ಕೋರಿ ಪೆಟಾ ಸಂಸ್ಥೆಯು ವತಿಯಿಂದ ರಾಜ್ಯ ಹೈಕೋರ್ಟ್‌ನಲ್ಲಿ ರಿಟ್ ಸಲ್ಲಿಸಲಾಗಿದ್ದು, ಇದರ ವಿರುದ್ಧ ನಾನು ನನ್ನ ವೈಯಕ್ತಿಕ ನೆಲೆಯಲ್ಲಿ ಹೈಕೋರ್ಟ್‌ನಲ್ಲಿ ಕಾನೂನು ಹೋರಾಟ ಮಾಡಲಿದ್ದೇನೆ ಎಂದು ಪುತ್ತೂರು ಶಾಸಕರೂ, ಕಳೆದ ವರ್ಷ ಬೆಂಗಳೂರಿನಲ್ಲಿ ನಡೆದ ಕಂಬಳದ ರೂವಾರಿಯೂ ಆದ ಅಶೋಕ್ ರೈ ಹೇಳಿದ್ದಾರೆ. ಪೆಟಾ ಸಂಸ್ಥೆಯವರು ಹೈಕೋರ್ಟ್ ಮೆಟ್ಟಿಲೇರಿದ್ದು ಗಮನಕ್ಕೆ ಬಂದಿದೆ. ಪೆಟಾ ರಿಟ್ ಸಲ್ಲಿಕೆ ಬೆನ್ನಲ್ಲೇ ನಾನು ಕೂಡಾ ನನ್ನ ವೈಯಕ್ತಿಕ ನೆಲೆಯಲ್ಲಿ ವಕೀಲರ ಮೂಲಕ



ರಿಟ್ ಪಿಟಿಶನ್ ಹಾಕಿದ್ದೇನೆ. ಇದರಲ್ಲಿ ನನ್ನನ್ನೂ ಒಂದು ಪಾರ್ಟಿ ಮಾಡಬೇಕೆಂದು ಕೋರಿದ್ದೇನೆ. ಸರಕಾರಿ ವಕೀಲರಿಗೆ ನ್ಯಾಯಾಂಗ ಹೋರಾಟದಲ್ಲಿ ನೆರವಾಗಲು ವಕೀಲರನ್ನು ನೇಮಿಸಿ ವಾದ ಮಂಡಿಸಲಿದ್ದೇನೆ ಎಂದರು.

## ಪ್ಯಾಲೆಸ್ತೀನ್‌ನಲ್ಲಿ ಸಾಮ್ರಾಜ್ಯಶಾಹಿ ಕ್ರೌರ್ಯ: ಮುನೀರ್



ಮಂಗಳೂರು: ಪ್ಯಾಲೆಸ್ತೀನ್‌ನಲ್ಲಿ ನಡೆಯುತ್ತಿರುವುದು ಯುದ್ಧವಲ್ಲ, ಸಾಮ್ರಾಜ್ಯಶಾಹಿ ಕ್ರೌರ್ಯ, ಭಾರತದ ನಾಗರಿಕರು ಈ ಅಮಾನವೀಯತೆಯ ವಿರುದ್ಧ ನಿಲ್ಲಬೇಕಿದೆ ಎಂದು ಸಿಪಿಎಂ ರಾಜ್ಯ ಸಮಿತಿ ಸದಸ್ಯ ಮುನೀರ್ ಕಾಟಿಪಳ್ಳ ಹೇಳಿದ್ದಾರೆ. ಯೆಯ್ಯಾಡಿಯ ಸಣ್ಣ ಕೈಗಾರಿಕಾ ಸಂಘದ ಸಭಾಂಗಣದಲ್ಲಿ ನಿರ್ಮಿಸಲಾಗಿದ್ದ ಕಾ. ಸೀತಾರಾಮ್ ಯೆಚೂರಿ ವೇದಿಕೆಯಲ್ಲಿ ಆಯೋಜಿಸಲಾಗಿದ್ದ ಸಿಪಿಐಎಂ ಮಂಗಳೂರು ನಗರ ಉತ್ತರ ವಲಯ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು. ತಾಯ್ನೆಲದ ವಿಮೋಚನೆಗಾಗಿ ಹೋರಾಡುತ್ತಿರುವ ಪ್ಯಾಲೆಸ್ತೀನ್ ಜನತೆಯ ಮೇಲೆ ಇಸ್ರೇಲ್ ಬರ್ಬರ ದಾಳಿ ನಡೆಸುತ್ತಿದೆ. ಯುದ್ಧ ವಿರಾಮಕ್ಕೆ ಆಗ್ರಹಿಸಿ, ನಾಗರಿಕರ ಮೇಲಿನ ದಾಳಿಯ ವಿರುದ್ಧವಾಗಿ ವಿಶ್ವಸಂಸ್ಥೆ ತೆಗೆದುಕೊಂಡಿರುವ ನಿರ್ಣಯ ಗಳನ್ನೂ ಇಸ್ರೇಲ್ ತಿರಸ್ಕರಿಸಿದೆ, ಅಮೆರಿಕಾ ನೇತೃತ್ವದ ಸಾಮ್ರಾಜ್ಯಶಾಹಿ ಕೂಟದ ಬೆಂಬಲದಿಂದ ಇಸ್ರೇಲ್ ಮಹಿಳೆಯರು, ಮಕ್ಕಳು ಎಂದು ಪರಿಗಣಿಸದೆ ಪ್ಯಾಲೆಸ್ತೀನ್ ನಾಗರಿಕರ ನರಮೇಧ ನಡೆಸುತ್ತಿದೆ ಎಂದರು.

## ವಕ್ಫ್ ಕೇವಲ ಸೊತ್ತಲ್ಲ, ಅದು ಮುಸ್ಲಿಮರ ಭಾವನೆ

ಮಂಗಳೂರು: ಕರ್ನಾಟಕ ಸಲಫಿ ಅಸೋಸಿಯೇಷನ್, ಮಂಗಳೂರು ಇದರ ವತಿಯಿಂದ ಮಂಗಳೂರಿನ ಹಿರಾ ಕನ್ವೆನ್ಷನ್ ಹಾಲ್‌ನಲ್ಲಿ ಅ.20ರಂದು ಮಹಲ್ಲ್ ಸಂಗಮ ಜರಗಿತು. ವಕ್ಫ್ ಕಾಯಿದೆಯ ನಿಯಮಗಳನ್ನು ವಿವರಿಸಿದ ಅಡ್ವಕೇಟ್ ಇಸ್ಮಾಈಲ್ ಕೇಂದ್ರ ಸರ್ಕಾರ ಜಾರಿಗೆ ತರಲು ಮುಂದಾಗಿರುವ ವಕ್ಫ್ ತಿದ್ದುಪಡಿ ಕಾಯಿದೆಯ ಅಪಾಯಗಳನ್ನು ವಿವರಿಸುತ್ತಾ ವಕ್ಫ್ ಮುಸ್ಲಿಮರ ಭಾವನೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಮಹಲ್ಲ್ ಸಬಲೀಕರಣ ಹೇಗೆ ಮಾಡಬಹುದು ಎಂದು ಕೆಎಸ್‌ಎ ಸಲಹಾ ಸಮಿತಿ ಅಧ್ಯಕ್ಷ ಇಜಾಯ್ ಸ್ವಲಾಹಿ ಪ್ರಸ್ತುತ ಪಡಿಸಿದರು. ಮದ್ರಸ ಶಿಕ್ಷಣದ




ಪ್ರಾಮುಖ್ಯತೆಯನ್ನು ಕೆಎಸ್‌ಎ ಶಿಕ್ಷಣ ಮಂಡಳಿ ಅಧ್ಯಕ್ಷರಾದ ಹಸೈನಾರ್ ಸ್ವಲಾಹಿ ವಿವರಿಸಿದರು. ಅಬೂಬಕ್ಕರ್ ನಝೀರ್ ಸಲಫಿ ಮಸ್ಜಿದ್ ನಿರ್ವಹಣೆ ಮಾಡುವವರ ಲಕ್ಷಣಗಳನ್ನು ವಿವರಿಸಿದರು. ಮಹಲ್ಲ್ ವ್ಯವಸ್ಥೆಯ ಚರಿತ್ರೆ ಮತ್ತು ವರ್ತಮಾನವನ್ನು ಕೆಎಸ್‌ಎ ಅಧ್ಯಕ್ಷ ಡಾ. ಹಫೀಝ್ ಸ್ವಲಾಹಿ ವಿವರಿಸಿದರು.

## ಸುದ್ದಿ ತುಣುಕು

ಸಂಡೂರು ಉಪಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣ ತುಕಾರಂ ಅವರು ನಾಮಪತ್ರ ಸಲ್ಲಿಸಿದರು.

ಕೇರಳದ ಲಾರಿ ಹಾಗೂ ಚಾಲಕ ಅರ್ಜುನ್ ಅವರ ಪತ್ತೆಗಾಗಿ ತೋರಿದ ಉತ್ಸಾಹವನ್ನು ಜಿಲ್ಲಾಡಳಿತ ಗುಡ್ಡ ಕುಸಿತದಲ್ಲಿ ನಾಪತ್ತೆಯಾಗಿರುವ ಸ್ಥಳೀಯರ ಪತ್ತೆಗೆ ತೋರುತ್ತಿಲ್ಲ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ಪ್ರಕರಣ ಸಂಬಂಧ ಮಾಜಿ ಸಚಿವ ಬಿ ನಾಗೇಂದ್ರ ಜಾಮೀನು ಮಂಜೂರಾತಿಯನ್ನು ರದ್ದು ಪಡಿಸಬೇಕೆಂದು ಇ.ಡಿ. ಅರ್ಜಿ ಸಲ್ಲಿಸಿದೆ.

ತಾಯಿ ಹೇಳಿದಂತೆ ಒಳ್ಳೆಯ ಮೂಹರ್ತ ನೋಡಿ ನಾಮಪತ್ರ ಸಲ್ಲಿಸಿದ್ದೇನೆ ಎಂದು ಶಿಗ್ಗಾಂವಿ ವಿಧಾನಸಭಾ ಉಪಚುನಾವಣೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಭರತ್ ಬೊಮ್ಮಾಯಿ ತಿಳಿಸಿದ್ದಾರೆ.

ಚನ್ನಪಟ್ಟಣ ಉಪಚುನಾವಣೆ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಸಿ.ಪಿ.ಯೋಗೇಶ್ವರ್ ಅವರು ನಾಮಪತ್ರ ಸಲ್ಲಿಸಿದರು.

ಚನ್ನಪಟ್ಟಣದಲ್ಲಿ ಯಾವುದೇ ಅಸಮಾಧಾನ ಇಲ್ಲ, ಎಲ್ಲವನ್ನೂ ಬಗೆಹರಿಸುತ್ತೇವೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಸಿ.ಪಿ.ಯೋಗೇಶ್ವರ್ ಅವರು ಕಾಂಗ್ರೆಸ್‌ಗೆ ಅನಿವಾರ್ಯ ಎನ್ನುವುದಕ್ಕಿಂತ ಇವತ್ತಿನ ಪರಿಸ್ಥಿತಿಗೆ ಅವಶ್ಯಕ ಎಂದು ಗೃಹ ಸಚಿವ ಜಿ. ಪರಮೇಶ್ವರ್ ಹೇಳಿದ್ದಾರೆ.

ದಕ್ಷಿಣ ಕನ್ನಡ ಸ್ಥಳೀಯ ಪ್ರಾಧಿಕಾರ ಕ್ಷೇತ್ರದಿಂದ ನಡೆದ ವಿಧಾನಪರಿಷತ್ ಉಪಚುನಾವಣೆಯಲ್ಲಿ ಬಿಜೆಪಿಯ ಕಿಶೋರ್ ಕುಮಾರ್ ಬೊಟ್ಯಾಡಿ 1697 ಮತಗಳ ಅಂತರದಿಂದ ಜಯ ಸಾಧಿಸಿದ್ದಾರೆ.

ಬೆಂಗಳೂರು ಕಟ್ಟಡ ದುರಂತದಲ್ಲಿ ಮೃತಪಟ್ಟವರಿಗೆ ಪ್ರಧಾನಿ ಮೋದಿ ಸಂತಾಪ ಸೂಚಿಸಿದ್ದು, ಮೃತರ ಕುಟುಂಬಗಳಿಗೆ ತಲಾ 2 ಲಕ್ಷ ರೂ ಪರಿಹಾರ ಘೋಷಣೆ ಮಾಡಿದ್ದಾರೆ.

ರಾಜ್ಯಾದ್ಯಂತ 6 ಲಕ್ಷಕ್ಕೂ ಅಧಿಕ ಸದಸ್ಯರನ್ನು ಹೊಂದಿರುವ ಒಂದು ದೊಡ್ಡ ಸಂಘಕ್ಕೆ ಇಬ್ಬರು ಮಾಜಿ ಅಧ್ಯಕ್ಷರು, ಮತ್ಯಾರೋ ನಾಲ್ವರು ಸದಸ್ಯರು ಕೊಟ್ಟ ದೂರು ಆಧರಿಸಿ ಆಡಳಿತಾಧಿಕಾರಿ ನೇಮಕ ಮಾಡಿದರೆ ಹೇಗೆ ಎಂದು ಸರ್ಕಾರದ ಕ್ರಮವನ್ನು ಹೈಕೋರ್ಟ್‌ನಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘ ಪ್ರಶ್ನಿಸಿದೆ.

ಯಾವುದೇ ಸಮಾಲೋಚನೆ ನಡೆಸದೇ ನ್ಯಾಯಾಲಯದ ಲಾಂಛನ ಮತ್ತು ನ್ಯಾಯದೇವತೆಯ ಪ್ರತಿಮೆಯಲ್ಲಿ ಬದಲಾವಣೆ ಮಾಡಿರುವುದನ್ನು ಆಕ್ಷೇಪಿಸಿ ಸುಪ್ರೀಂ ಕೋರ್ಟ್ ಬಾರ್ ಅಸೋಸಿಯೇಷನ್ (ಎಸ್‌ಸಿಬಿಎ) ನಿರ್ಣಯ ಪಾಸ್ ಮಾಡಿದೆ.

ಆಮ್ ಆದ್ಮಿ ಪಕ್ಷದ ಸಂಚಾಲಕ ಅರವಿಂದ್ ಕೇಜ್ರಿವಾಲ್ ಅವರು ಮಹಾರಾಷ್ಟ್ರ ಮತ್ತು ಜಾರ್ಖಂಡ್‌ನಲ್ಲಿ ಇಂಡಿಯಾ ಬ್ಲಾಕ್ ಅಭ್ಯರ್ಥಿಗಳ ಪರ ಪ್ರಚಾರ ನಡೆಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಕಾಂಗ್ರೆಸ್, ಶಿವಸೇನೆ (ಯುಬಿಟಿ) ಮತ್ತು ಎನ್‌ಸಿಪಿ (ಶರದ್ ಪವಾರ್ ಬಣ)ಯ ಮಹಾ ವಿಕಾಸ್ ಅಘಾಡಿ ಕೂಟದಲ್ಲಿ ಸೀಟು ಹಂಚಿಕೆ ಮಾತುಕತೆ ಮುಗಿದಿವೆ. ಮೂರೂ ಪಕ್ಷಗಳು ತಲಾ 85 ಸ್ಥಾನಗಳಲ್ಲಿ ಸ್ಪರ್ಧೆ ಮಾಡಲಿವೆ.

ಸಮಂತಾ ನಟನೆಯ 'ಸಿಟಾಡೆಲ್ ಹನಿ ಬನ್ನಿ' ವೆಬ್ ಸಿರೀಸ್ ಬಿಡುಗಡೆಗೆ ಸಿದ್ಧವಾಗಿದ್ದು, ಚಿತ್ರತಂಡ ಪ್ರಚಾರ ಕೈಗೊಂಡಿದೆ.

## ಪಾಲಕ್ ರೈಸ್



**ಬೇಕಾಗುವ ಪದಾರ್ಥಗಳು :**

ಅನ್ನ - 2 ಕಪ್
ಪಾಲಾಕ್ ಸೊಪ್ಪು - 1 ಕಪ್
ಈರುಳ್ಳಿ - 1
ಹಸಿ ಮೆಣಸಿನಕಾಯಿ - 3-4
ಚಕ್ಕೆ - ಸ್ವಲ್ಪ
ಕಾಳುಮೆಣಸು - 5
ಸಾಸಿವೆ - 1 ಚಮಚ
ಜೀರಿಗೆ - 1 ಚಮಚ
ಲವಂಗ - 2
ಗೋಡಂಬಿ - 10
ಉಪ್ಪು - ರುಚಿಗೆ ತಕ್ಕಷ್ಟು
ಎಣ್ಣೆ 2-3 ಚಮಚ
ನಿಂಬೆಹಣ್ಣು - 1

**ಮಾಡುವ ವಿಧಾನ :**

ಮೊದಲಿಗೆ ಬಾಣಲೆಯಲ್ಲಿ ಎಣ್ಣೆ ಹಾಕಿ ಕಾಯಿಸಿ ಅದಕ್ಕೆ ಸಾಸಿವೆ, ಜೀರಿಗೆ, ಮೆಣಸಿನ ಕಾಯಿ, ಕತ್ತರಿಸಿದ ಈರುಳ್ಳಿ ಹಾಕಿ ಕೆಲವು ನಿಮಿಷ ಹುರಿಯಬೇಕು. ನಂತರ ಕತ್ತರಿಸಿಕೊಂಡ ಪಾಲಾಕ್ ಸೊಪ್ಪನ್ನು ಹಾಕಿ ಹುರಿಯಬೇಕು. ಇದಕ್ಕೆ 1/2 ಕಪ್ ನೀರು ಹಾಕಿ ಕುದಿಯುವವರೆಗೂ ಸಣ್ಣ ಉರಿಯಲ್ಲಿಡಬೇಕು. ನಂತರ ಲವಂಗ, ಚಕ್ಕೆ, ಕರಿಮೆಣಸು ಮತ್ತು ಗೋಡಂಬಿಯನ್ನು ನುಣ್ಣಗೆ ರುಬ್ಬಿಕೊಂಡು ಬಾಣಲೆಯಲ್ಲಿ ಎಣ್ಣೆಗೆ ಹಾಕಿ ಹುರಿಯಬೇಕು. ನಂತರ ಪಾಲಕ್ ಮಿಶ್ರಣದೊಂದಿಗೆ ರುಬ್ಬಿದ ಮಿಶ್ರಣವನ್ನು ಬೆರೆಸಿ ಅಗತ್ಯವಿದ್ದರೆ ರುಚಿಗೆ ತಕ್ಕಷ್ಟು ಉಪ್ಪು ಬೆರೆಸಿ ಚೆನ್ನಾಗಿ ತಿರುಗಿಸಿ ತಣ್ಣಗಾಗಲು ಬಿಡಬೇಕು. ತಣ್ಣಗಾದ ಪಾಲಾಕ್ ಮಸಾಲೆಯೊಂದಿಗೆ ಅನ್ನ ಬೆರೆಸಿ ನಿಂಬೆ ರಸ ಸೇರಿಸಿ ಕಲಸಿದರೆ ರುಚಿಕರವಾದ ಪಾಲಾಕ್ ರೈಸ್ ಸವಿಯಲು ಸಿದ್ದ.

## ಭಾರತದೊಂದಿಗೆ ಗಡಿ ಗಸ್ತು ವ್ಯವಸ್ಥೆ ಒಪ್ಪಂದ



ಬೀಜಿಂಗ್: ಭಾರತ-ಚೀನಾ ಗಡಿ ಪ್ರದೇಶಗಳಲ್ಲಿನ ವಾಸ್ತವಿಕ ನಿಯಂತ್ರಣ ರೇಖೆಯ ಉದ್ದಕ್ಕೂ ಗಸ್ತು ವ್ಯವಸ್ಥೆಯನ್ನು ಪುನಾರಂಭಿಸುವ ಕುರಿತು ನವದೆಹಲಿ ಮತ್ತು ಬೀಜಿಂಗ್ ನಡುವೆ ಒಪ್ಪಂದವಾಗಿರುವುದನ್ನು ಚೀನಾ ದೃಢಪಡಿಸಿದೆ. ಇದೇ ವಿಷಯದ ಕುರಿತಾಗಿ ಭಾರತದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ನೀಡಿದ್ದ ಹೇಳಿಕೆ ಬಹುತೇಕ ಚೀನಾದ ಹೇಳಿಕೆಯೊಂದಿಗೆ ತಾಳೆಯಾಗುತ್ತದೆ.

## ಭಾರತದಿಂದ ಪ್ಯಾಲೆಸ್ತೈನ್‌ಗೆ 30ಟನ್ ಔಷಧ, ಆಹಾರ !

ನವದೆಹಲಿ: ಭಾರತವು ಪ್ಯಾಲೆಸ್ತೈನ್‌ಗೆ 30 ಟನ್ ಔಷಧ ಮತ್ತು ಆಹಾರ ಪದಾರ್ಥಗಳನ್ನು ಒಳಗೊಂಡ ಮೊದಲ ಕಂತಿನ ಪರಿಹಾರ ಸಾಮಗ್ರಿಗಳನ್ನು ರವಾನಿಸಿದೆ. ಹಮಾಸ್-ಇಸ್ರೇಲ್ ಸಂಘರ್ಷದಿಂದಾಗಿ ಆರ್ಥಿಕ ಬಿಕ್ಕಟ್ಟನ್ನು ಎದುರಿಸುತ್ತಿರುವ ಪ್ಯಾಲೆಸ್ತೈನಿಯರಿಗೆ ಸಹಾಯ ಮಾಡುವ ಯುಎನ್‌ಆರ್‌ಡಬ್ಲ್ಯೂಎದ ಪ್ರಯತ್ನಗಳನ್ನು ಬೆಂಬಲಿಸುವುದನ್ನು ಮುಂದುವರಿಸುವುದಾಗಿ ಭಾರತ ಹೇಳಿದೆ.



## ಹೆಚ್ಚುವರಿ ನೆರವು ಕೋರಿ ಐಎಂಎಫ್ ಮೊರೆ ಹೋದ ಪಾಕ್



ಇಸ್ಲಾಮಾಬಾದ್: ಹವಾಮಾನ ಬದಲಾವಣೆಯ ವಿನಾಶಕಾರಿ ಪರಿಣಾಮ ಎದುರಿಸಲು ಹೆಚ್ಚುವರಿಯಾಗಿ 2 ಮಿಲಿಯನ್ ಡಾಲರ್ ಹಣಕಾಸು ನೆರವು ನೀಡುವಂತೆ ಪಾಕಿಸ್ತಾನ ಅಂತಾರಾಷ್ಟ್ರೀಯ ಹಣಕಾಸು ನಿಧಿ (ಐಎಂಎಫ್) ಗೆ ಮನವಿ ಮಾಡಿದೆ. ತಿಂಗಳಾಂತ್ಯದಲ್ಲಿ ಐಎಂಎಫ್ ಸಭೆ ನಿಗದಿಯಾಗಿದೆ. ಹೀಗಾಗಿ, ಹೆಚ್ಚುವರಿ ನಿಧಿ ನೀಡುವಂತೆ ಪಾಕಿಸ್ಥಾನ ಹಣಕಾಸು ಸಚಿವ ಮೊಹಮ್ಮದ್ ಔರಂಗಜೇಬ್ ಮನವಿ ಮಾಡಿದ್ದಾರೆ. ಅಮೆರಿಕದ ವಾಷಿಂಗ್ಟನ್ ಡಿಸಿಯಲ್ಲಿ ಐಎಂಎಫ್, ವಿಶ್ವಬ್ಯಾಂಕ್ ಗ್ರೂಪ್‌ನ ವಾರ್ಷಿಕ ಸಭೆ ಆಯೋಜನೆಯಾಗಿದೆ.

## ವಿಯೆನ್ನಾ ಒಪ್ಪಂದ ಉಲ್ಲಂಘನೆ ಸಹಿಸುವುದಿಲ್ಲ - ಜೋಲಿ

ಕೆನಡಾ: ಒಟ್ಟಾವಾದಲ್ಲಿರುವ ಭಾರತೀಯ ಹೈಕಮಿಷನರ್ ಸಿಖ್ ನಿಜ್ಜರ್ ಹತ್ಯೆಯಲ್ಲಿ ಭಾಗಿಯಾಗಿದ್ದಾರೆ ಎಂಬುದು ಗೊತ್ತಾದ ಬಳಿಕ ಭಾರತೀಯ ರಾಜತಾಂತ್ರಿಕರಿಗೆ ಸ್ಪಷ್ಟವಾಗಿ ಸೂಚನೆ ನೀಡಲಾಗಿದೆ ಎಂದು ಕೆನಡಾದ ವಿದೇಶಾಂಗ ವ್ಯವಹಾರಗಳ ಸಚಿವೆ ಮೆಲಾನಿ ಜೋಲಿ ಹೇಳಿದ್ದಾರೆ. ವಿಯೆನ್ನಾ ಒಪ್ಪಂದವನ್ನು ಉಲ್ಲಂಘಿಸುವ ಅಥವಾ ಕೆನಡಿಯನ್ನರ ಜೀವನವನ್ನು ಅಪಾಯಕ್ಕೆ ಸಿಲುಕಿಸುವ ಯಾವುದೇ ರಾಜತಾಂತ್ರಿಕರನ್ನು ಸರ್ಕಾರ ಸಹಿಸುವುದಿಲ್ಲ ಎಂದು ಜೋಲಿ ಇದೇ ವೇಳೆ ಮತ್ತೊಮ್ಮೆ ಎಚ್ಚರಿಕೆ ನೀಡಿದ್ದಾರೆ.



## ರಷ್ಯಾದಲ್ಲಿ 16ನೇ ಬ್ರಿಕ್ಸ್ ಶೃಂಗಸಭೆ



ನವದೆಹಲಿ: ಬ್ರಿಕ್ಸ್ ಶೃಂಗಸಭೆ ವೇಳೆ ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್‌ರೊಂದಿಗೆ ಪ್ರಧಾನಿ ಮೋದಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಈ ವೇಳೆ, ಭಾರತ ಮತ್ತು ಇರಾನ್ ನಡುವಿನ ಸಂಬಂಧಗಳ ಬಗ್ಗೆ ಸಮಾಲೋಚನೆ ನಡೆಸಲಾಯಿತು. ಇರಾನ್‌ನ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಅವರೊಂದಿಗೆ ಉತ್ತಮ ಸಭೆಯನ್ನು ನಡೆಸಿದ್ದೇವೆ. ನಾವು ನಮ್ಮ ದೇಶಗಳ ನಡುವಿನ ಸಂಪೂರ್ಣ ಶ್ರೇಣಿಯ ಸಂಬಂಧಗಳನ್ನು ಪರಿಶೀಲಿಸಿದ್ದೇವೆ. ಭವಿಷ್ಯದಲ್ಲಿ 2 ದೇಶಗಳ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವ ಮಾರ್ಗಗಳ ಬಗ್ಗೆಯೂ ನಾವು ಚರ್ಚಿಸಿದ್ದೇವೆ ಎಂದು ಮೋದಿ ಹೇಳಿದ್ದಾರೆ.

## ಸಿರಿಯಾ ರಾಜಧಾನಿ ಮೇಲೆ ಇಸ್ರೇಲ್ ದಾಳಿ

ಡಮಾಸ್ಕಸ್: ಸಿರಿಯಾದ ರಾಜಧಾನಿ ಡಮಾಸ್ಕಸ್‌ನಲ್ಲಿ ನಾಗರಿಕರನ್ನು ಗುರಿಯಾಗಿಸಿಕೊಂಡು ಇಸ್ರೇಲ್ ನಡೆಸಿದ ಕ್ಷಿಪಣಿ ದಾಳಿಯಲ್ಲಿ ಇಬ್ಬರು ಸಾವನ್ನಪ್ಪಿದ್ದು, ಮೂವರು ಗಾಯಗೊಂಡಿದ್ದಾರೆ ಎಂದು ಸಿರಿಯಾ ರಕ್ಷಣಾ ಸಚಿವಾಲಯ ತಿಳಿಸಿದೆ. ಮಜ್ಜೆಯ ಪೂರ್ವ ಭಾಗದಲ್ಲಿನ ಗೋಲ್ಡನ್ ಮಜ್ಜೆಯ ವಾಹನ ಗುರಿಯಾಗಿಸಿ ಈ ದಾಳಿ ನಡೆಸಲಾಗಿದೆ. ಇತ್ತೀಚೆಗೆ ಸಿರಿಯಾ ಮೇಲೆ ಇಸ್ರೇಲ್ ಮಿಲಿಟರಿ ದಾಳಿ ಹೆಚ್ಚಿದೆ. ಉಗ್ರರ ಪಡೆಗಳನ್ನು ಗುರಿಯಾಗಿಸಿಕೊಂಡು ಇಂತಹ ದಾಳಿಗಳನ್ನು ಮಾಡಲಾಗುತ್ತಿದೆ ಎಂದು ತಿಳಿದು ಬಂದಿದೆ.



## ಕಾಮನ್‌ವೆಲ್ತ್ ಗೇಮ್ಸ್‌ನಿಂದ ಹಾಕಿ, ಕುಸ್ತಿ ಹೊರಗೆ




ನವದೆಹಲಿ: 2026ರಲ್ಲಿ ಗ್ಲಾಸ್ಗೋದಲ್ಲಿ ನಡೆಯಲಿರುವ ಕಾಮನ್‌ವೆಲ್ತ್ ಕ್ರೀಡಾಕೂಟಕ್ಕೂ ಮೊದಲೇ 10 ಕ್ರೀಡೆಗಳನ್ನು ಟೂರ್ನಿಯಿಂದ ತೆಗೆದು ಹಾಕಲಾಗಿದೆ. ಇದರಲ್ಲಿ ಭಾರತ ಪ್ರತಿನಿಧಿಸುವ 6 ಪಂದ್ಯಗಳೂ ಸೇರಿವೆ. ಹಾಕಿ, ಕ್ರಿಕೆಟ್, ಬ್ಯಾಡ್ಮಿಂಟನ್, ಕುಸ್ತಿ, ಟೇಬಲ್ ಟೆನ್ನಿಸ್, ಡೈವಿಂಗ್, ರಗ್ಬಿ ಸೆವೆನ್ಸ್, ಬೀಚ್ ವಾಲಿಬಾಲ್, ಮೌಂಟೇನ್ ಬೈಕಿಂಗ್, ಸ್ಕ್ವಾಷ್ ಮತ್ತು ರಿದಮಿಕ್ ಜಿಮ್ನ್ಯಾಸ್ಟಿಕ್ ಕ್ರೀಡೆಗಳಿವೆ. ಈ ಬಗ್ಗೆ ಕಾಮನ್‌ವೆಲ್ತ್ ಗೇಮ್ಸ್ ಫೆಡರೇಶನ್ ಹೇಳಿಕೆ ಬಿಡುಗಡೆ ಮಾಡಿದೆ.

## ಟಿ-20 ವಿಶ್ವಕಪ್: ನ್ಯೂಜಿಲ್ಯಾಂಡ್ ಚಾಂಪಿಯನ್ಸಿಪ್

ದುಬೈ: ಭಾರೀ ನಿರೀಕ್ಷೆ ಮೂಡಿಸಿದ್ದ ವನಿತೆಯರ ಟಿ-20 ವಿಶ್ವಕಪ್‌ನಲ್ಲಿ ಹೊಸ ತಂಡ ಚಾಂಪಿಯನ್ ಆಗಿ ಹೊರಹೊಮ್ಮಿತು. ದಕ್ಷಿಣಾ ಆಫ್ರಿಕಾ ವನಿತೆಯರ ಮೇಲೆ ಸವಾರಿ ಮಾಡಿದ ನ್ಯೂಜಿಲ್ಯಾಂಡ್ ವನಿತೆಯರು ಚೊಚ್ಚಲ ವಿಶ್ವ ಕಿರೀಟವನ್ನು ಮುಡಿಗೇರಿಸಿಕೊಂಡರು. ಕಿವೀಸ್‌ನ ಅಮೇಲಿಯಾ ಕೆರ್ ಆಲ್‌ರೌಂಡರ್ ಆಟ, ತಂಡದ ಸಾಂಘಿಕ ಪ್ರದರ್ಶನದಿಂದ ನ್ಯೂಜಿಲ್ಯಾಂಡ್ ಮಹಿಳೆಯರು ದುಬೈನ ಕ್ರೀಡಾಂಗಣದಲ್ಲಿ ನಡೆದ ಫೈನಲ್ ರಾರಾಜಿಸಿದರು.




## ಭಾರತದಲ್ಲಿ ಟೆಸ್ಟ್ ಪಂದ್ಯ ಗೆದ್ದ ನ್ಯೂಜಿಲೆಂಡ್




ಬೆಂಗಳೂರು: ಭಾರತ ವಿರುದ್ಧದ ಮೊದಲ ಟೆಸ್ಟ್ ಪಂದ್ಯದ ಐದನೇ ದಿನ ನ್ಯೂಜಿಲೆಂಡ್ ಭರ್ಜರಿ ಗೆಲುವು ಸಾಧಿಸಿತು. ಭಾರತ ನೀಡಿದ್ದ 107 ರನ್‌ಗಳ ಗುರಿ ಬೆನ್ನತ್ತಿದ ಕಿವೀಸ್, ಕೇವಲ 2 ವಿಕೆಟ್ ಕಳೆದುಕೊಂಡು ಸುಲಭವಾಗಿ ಗುರಿ ತಲುಪಿತು. ಇದರೊಂದಿಗೆ 36 ವರ್ಷಗಳ ಬಳಿಕ ಭಾರತದಲ್ಲಿ ಇದೇ ಮೊದಲ ಬಾರಿಗೆ ಗೆಲುವಿನ ಸಿಹಿ ಕಂಡಿದೆ.

## ಹೈಟೆಕ್ ಫಾರ್ಮಾಸ್ಯುಟಿಕಲ್ಸ್ ಪಾರ್ಕ್: ಸಚಿವ ಎಂ.ಬಿ.ಪಾಟೀಲ್



ಬೆಂಗಳೂರು: ಕೈಗಾರಿಕಾ ಬೆಳವಣಿಗೆಗೆ ಒತ್ತು ನೀಡಿರುವ ರಾಜ್ಯ ಸರ್ಕಾರವು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಹತ್ತಿರ ಕೋಲಾರ ಅಥವಾ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಫಾರ್ಮಾಸ್ಯುಟಿಕಲ್ಸ್ ಪಾರ್ಕ್ ಸ್ಥಾಪಿಸಲು ತೀರ್ಮಾನಿಸಿದೆ. ಸಚಿವ ಎಂ.ಬಿ. ಪಾಟೀಲ್ ವಿವಿಧ ಔಷಧ ತಯಾರಿಕೆ ಕಂಪನಿಗಳ ಪ್ರಮುಖರೊಂದಿಗೆ ಮಾತನಾಡಿದರು. ಇದಕ್ಕೆ ಔಷಧ ತಯಾರಿಕಾ ಕ್ಷೇತ್ರದಲ್ಲಿರುವ ಪರಿಣಿತ ಉದ್ಯಮಿಗಳು ಮತ್ತು ವಿಜ್ಞಾನಿ ಗಳ ಸಲಹೆಗಳನ್ನು ಪಡೆಯಲಾಗುವುದು ಎಂದು ಸಚಿವರು ಹೇಳಿದ್ದಾರೆ.

## ಕೆಇಎ ಷೋಕಾಸ್ ನೋಟಿಸ್ !

ಬೆಂಗಳೂರು: ಯುಜಿಸಿಇಟಿ-2024ರ ಎರಡನೇ ಮುಂದುವರಿದ ಸುತ್ತಿನಲ್ಲಿ ಸೀಟು ಹಂಚಿಕೆಯಾದರೂ ಶುಲ್ಕ ಪಾವತಿಸಿ, ಸಂಬಂಧಪಟ್ಟ ಎಂಜಿನಿಯರಿಂಗ್ ಕಾಲೇಜುಗಳಿಗೆ ವರದಿ ಮಾಡಿಕೊಳ್ಳದ ಒಟ್ಟು 2,348 ಅಭ್ಯರ್ಥಿಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಕಾರಣ ಕೇಳಿ ಷೋಕಾಸ್ ನೋಟಿಸ್ ಜಾರಿ ಮಾಡಿದೆ.




ವಿವಿಧ ಕಾಲೇಜುಗಳಲ್ಲಿ ಈ ಅಭ್ಯರ್ಥಿಗಳು ವರದಿ ಮಾಡಿಕೊಳ್ಳದ ಕಾರಣ ಅವರ ನಂತರದ ಮೆರಿಟ್ ವಿದ್ಯಾರ್ಥಿಗಳಿಗೆ ಈ ಸೀಟುಗಳು ಸಿಗದೆ, ಅನ್ಯಾಯ ಮಾಡಿದಂತಾಗಿದೆ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್. ಪ್ರಸನ್ನ ನೋಟಿಸ್‌ನಲ್ಲಿ ಉಲ್ಲೇಖಿಸಿದ್ದಾರೆ.

## ಹೈನುಗಾರರಿಗೆ ಹಾಲು ಖರೀದಿ ದರ ಕಡಿತದ ಬರೆ

ಶಿವಮೊಗ್ಗ: ಶಿವಮೊಗ್ಗ, ದಾವಣಗೆರೆ ಹಾಗೂ ಚಿತ್ರದುರ್ಗ ಹಾಲು ಒಕ್ಕೂಟ ತನ್ನ ನಷ್ಟವನ್ನು ಮುಂದಿಟ್ಟುಕೊಂಡು ಹಾಲು ಖರೀದಿಯಲ್ಲಿ ಪ್ರತಿ ಕೆ.ಜಿಗೆ 90 ಪೈಸೆ ದರ ಕಡಿತ ಮಾಡಿದೆ. ಇದರಿಂದ ಹಾಲು ಉತ್ಪಾದಕರಿಗೆ ನಷ್ಟ ಉಂಟಾಗುತ್ತಿದೆ ಎಂದು ಹಾಲು ಉತ್ಪಾದಕರು ಆಕ್ರೋಶ ಹೊರಹಾಕಿದ್ದಾರೆ. ಹೊಸ ಆಡಳಿತ ಮಂಡಳಿ ಅಸ್ತಿತ್ವಕ್ಕೆ ಬಂದ ಹಿನ್ನೆಲೆಯಲ್ಲಿ ಸಭೆ ನಡೆಸಿ ದರ ಕಡಿತ ಮಾಡುವ ನಿರ್ಧಾರಕ್ಕೆ ಬಂದಿದ್ದಾರೆ. ಹಾಲಿ ಶಿಮೂಲ್‌ನಲ್ಲಿ ರೂ. 6.75 ಕೋಟಿ ನಷ್ಟ ಉಂಟಾಗಿದೆ. ಹಾಲಿನ ದರ ಕಡಿಮೆ ಮಾಡಿ ಹಾಲು ಉತ್ಪಾದಕರು ಹೈನುಗಾರಿಕೆಯಿಂದಲೇ ಹಿಂದೆ ಸರಿಯುವ ಪರಿಸ್ಥಿತಿ ಬಂದಿದೆ.



## ರಾಜ್ಯದ ಅತಿ ಎತ್ತರದ ಶ್ರೀರಾಮಾಂಜನೇಯ ಮೂರ್ತಿ ಉದ್ಘಾಟನೆ

ಬೆಂಗಳೂರು: ರಾಜಧಾನಿಯಲ್ಲಿ 63 ಅಡಿ ಎತ್ತರದ ಶ್ರೀರಾಮಾಂಜನೇಯ ಮೂರ್ತಿ ತಲೆಎತ್ತಿದೆ. ಉಡುಪಿ ಪೇಜಾವರ ಮಠದ ವಿಶ್ವಪ್ರಸನ್ನತೀರ್ಥ ಸ್ವಾಮೀಜಿ, ಆದಿಚುಂಚನಗಿರಿ ಮಹಾಸಂಸ್ಥಾನದ ನಿರ್ಮಲಾನಂದನಾಥ ಸ್ವಾಮೀಜಿ ಹಾಗೂ ಸೌಮ್ಯನಾಥ ಸ್ವಾಮೀಜಿ ಮೂರ್ತಿಯನ್ನು ಲೋಕಾರ್ಪಣೆಗೊಳಿಸಿದರು. ಯುವ ಶಿಲ್ಪಿ ಜೀವನ್ ಶ್ರೀರಾಮಾಂಜನೇಯ ಮೂರ್ತಿಯನ್ನು ನಿರ್ಮಿಸಿದ್ದಾರೆ. ರಾಜಾಜಿನಗರದ ಶ್ರೀರಾಮಮಂದಿರದಲ್ಲಿ ಶ್ರೀರಾಮ ಸೇವಾ ಮಂಡಳಿಯಿಂದ ನಿರ್ಮಾಣಗೊಂಡಿರುವ ಕರ್ನಾಟಕದ ಅತಿ ಎತ್ತರದ ಶ್ರೀರಾಮಾಂಜನೇಯ ಪ್ರತಿಮೆ ಉದ್ಘಾಟನೆ ಬಳಿಕ ಮಾತನಾಡಿದರು.



## ಬೆಂಗಳೂರು ಕಂಬಳ: ಹೈಕೋರ್ಟ್‌ಗೆ ಕಂಬಳ ಸಮಿತಿ ಮಾಹಿತಿ



ಬೆಂಗಳೂರು: ಇಲ್ಲಿನ ಅರಮನೆ ಮೈದಾನದಲ್ಲಿ ಅಕ್ಟೋಬರ್ 26ರಂದು ಕಂಬಳ (ಕೋಣಗಳ ಓಟ) ಸ್ಪರ್ಧೆ ನಡೆಸುತ್ತಿಲ್ಲ ಎಂಬುದಾಗಿ ಬೆಂಗಳೂರು ಕಂಬಳ ಸಮಿತಿಯು ಹೈಕೋರ್ಟ್‌ಗೆ ಮಾಹಿತಿ ನೀಡಿದೆ. ಬೇರೆ ಕಡೆ ಕಂಬಳ ಆಯೋಜನೆಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರಕ್ಕೆ ಅನುಮತಿ ಕೋರಿಲ್ಲ, ಪೆಟಾದ ಸಲ್ಲಿಸಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ವೇಳೆ, ಮುಖ್ಯ ನ್ಯಾಯಮೂರ್ತಿ ಎನ್. ವಿ ಅಂಜಾರಿಯಾ ಅವರ ನೇತೃತ್ವದ ವಿಭಾಗೀಯ ಪೀಠಕ್ಕೆ, ಕಂಬಳ ಸಮಿತಿ ಪರ ವಕೀಲರು ಮಾಹಿತಿ ನೀಡಿದರು.

## ಮಾನವ ಕಳ್ಳಸಾಗಣೆ : ಬಾಲಕಿಯರನ್ನು ರಕ್ಷಿಸಿದ ಸಿಸಿಬಿ

ಬೆಂಗಳೂರು: ಅಕ್ರಮವಾಗಿ ಕಳ್ಳಸಾಗಣೆ ಮಾಡಿ ವೇಶ್ಯಾವಾಟಿಕೆಯ ಕೂಪಕ್ಕೆ ತಳ್ಳಲ್ಪಟ್ಟಿದ್ದ 12 ಅಪ್ರಾಪ್ತ ಬಾಲಕಿಯರನ್ನು ಸಿಸಿಬಿಯ ಮಹಿಳಾ ಸಂರಕ್ಷಣಾ ದಳದ ಪೊಲೀಸರು ರಕ್ಷಿಸಿದ್ದಾರೆ. ಮೇ ತಿಂಗಳಿನಿಂದ ಅಕ್ಟೋಬರ್‌ವರೆಗೆ ಸರ್ಕಾರೇತರ ಸಂಸ್ಥೆಗಳ ಸಹಯೋಗದಲ್ಲಿ ಸಿಸಿಬಿ ಪೊಲೀಸರು ಕಾರ್ಯಾಚರಣೆ ಕೈಗೊಂಡಿದ್ದರು. ಈ ವೇಳೆ 14ರಿಂದ 17 ವರ್ಷದ ಬಾಲಕಿಯರನ್ನು ರಕ್ಷಿಸಿದ್ದಾರೆ. ಸ್ಥಳೀಯ ಬಾಲಕಿಯರು, ತ್ರಿಪುರಾ, ಮಹಾರಾಷ್ಟ್ರ, ಪಂಜಾಬ್ ರಾಜ್ಯಗಳ, ಪಶ್ಚಿಮ ಬಂಗಾಳ, ಬಾಂಗ್ಲಾದೇಶ ಸೇರಿದಂತೆ ಒಟ್ಟು 12 ಬಾಲಕಿಯರನ್ನು ರಕ್ಷಿಸಲಾಗಿದೆ.




## ಪರಿಹಾರಕ್ಕೆ ಸಿದ್ಧತೆ ಮಾಡಿಕೊಂಡಿದ್ದೇವೆ: ಸಿಎಂ ಸಿದ್ದರಾಮಯ್ಯ

ಮೈಸೂರು : ಪ್ರಕೃತಿ ವಿಕೋಪದಿಂದ ಆಗಿರುವ ಅನಾಹುತಗಳಿಗೆ ಪರಿಹಾರ ನೀಡುತ್ತೇವೆ. ಎಲ್ಲ ಸಿದ್ಧತೆ ಮಾಡಿಕೊಂಡಿದ್ದೇವೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನ ರಾಮಕೃಷ್ಣನಗರದಲ್ಲಿರುವ ತಮ್ಮ ನಿವಾಸದಲ್ಲಿ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು. ಮಳೆ ಅನಾಹುತಗಳ ಕುರಿತು ನಿಗಾ ವಹಿಸಿದ್ದೇವೆ. ಸಕಲ ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ. ಸ್ಥಳ ಸಮೀಕ್ಷೆ ಕೂಡ ನಡೆಯುತ್ತಿದೆ. ಪರಿಹಾರ ನೀಡುತ್ತೇವೆ ಎಂದರು. ಮಳೆಗೆ ದಸರಾ ವಸ್ತುಪ್ರದರ್ಶನ ದಿಢೀರ್ ಅಂತ ಒಂದು ದಿನದ ಮಟ್ಟಿಗೆ ಸ್ಥಗಿತಗೊಳಿಸಲಾಗಿದೆ.



## ಕೈಗಾರಿಕಾ ಮದ್ಯದ ಉತ್ಪಾದನೆ, ನಿಯಂತ್ರಣ ರಾಜ್ಯಗಳ ಅಧಿಕಾರ: ಸುಪ್ರೀಂ

ನವದೆಹಲಿ: ಕೈಗಾರಿಕಾ ಮದ್ಯದ ಉತ್ಪಾದನೆ ಮತ್ತು ಪೂರೈಕೆಯ ಮೇಲೆ ರಾಜ್ಯಗಳಿಗೆ ನಿಯಂತ್ರಣ ಅಧಿಕಾರವಿದೆ ಎಂದು ಸುಪ್ರೀಂ ಕೋರ್ಟ್ ಬುಧವಾರ ಹೇಳಿದೆ. ಸಂವಿಧಾನದ ಏಳನೇ ಅನುಸೂಚಿಯಲ್ಲಿ ರಾಜ್ಯ ಪಟ್ಟಿಯ ನಮೂದು 8 ರಲ್ಲಿ "ಮಾದಕ ಮದ್ಯ" ಎಂಬ ಪದವು ಕೈಗಾರಿಕಾ ಮದ್ಯವನ್ನು ತನ್ನ ವ್ಯಾಪ್ತಿಯಲ್ಲಿ ಸೇರಿಸುತ್ತದೆ ಎಂದು ಸುಪ್ರೀಂ ಕೋರ್ಟ್ 8:1 ಬಹುಮತದ ತೀರ್ಪಿನಲ್ಲಿ ಅಭಿಪ್ರಾಯಪಟ್ಟಿದೆ. 1990ರಲ್ಲಿ 7 ನ್ಯಾಯಾಧೀಶರ ಪೀಠ ನೀಡಿದ್ದ ತೀರ್ಪನ್ನು ಸುಪ್ರೀಂಕೋರ್ಟ್ ಬಹುಮತದ ತೀರ್ಪು ರದ್ದುಗೊಳಿಸಿದೆ.



## ಉಗ್ರವಾದದ ಬಗ್ಗೆ ದ್ವಿಮುಖ ನೀತಿ ಬೇಡ: ಪಾಕಿಸ್ಥಾನಕ್ಕೆ ಮೋದಿ ಚಾಟಿ



ನವದೆಹಲಿ: ಭಯೋತ್ಪಾದನೆ ನಿರ್ಮೂಲನೆ ಮಾಡುವಲ್ಲಿ ದ್ವಿಮುಖ ನೀತಿಯನ್ನು ಹೊಂದಿರಬಾರದು. ಅದರ ವಿರುದ್ಧ ಒಟ್ಟಾಗಿ ಹೋರಾಡಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಬ್ರಿಕ್ಸ್ ಶೃಂಗಸಭೆಯಲ್ಲಿ ಪಾಕಿಸ್ತಾನದ ಕುಟಿಲತೆ ವಿರುದ್ಧ ವಾಗ್ದಾಳಿ ನಡೆಸಿದರು. ಒಂದೆಡೆ ಭಯೋತ್ಪಾದನೆ ವಿರುದ್ಧ ಹೋರಾಟ, ಇನ್ನೊಂದೆಡೆ ಉಗ್ರ ಸಂಘಟನೆಗಳಿಗೆ ಹಣಕಾಸು ನೆರವು ನೀಡುವುದು ಸರಿಯಲ್ಲ. ಇಂತಹ ದ್ವಿಮುಖ ನೀತಿಯು ಅಪಾಯಕಾರಿ, ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಏಕಮನಸ್ಸಿನ, ದೃಢ ಬೆಂಬಲವಿರಬೇಕು ಎಂದರು.

## ಕರ್ತಾರ್ ಪುರ್ ಸಾಹಿಬ್ ಕಾರಿಡಾರ್ ಒಪ್ಪಂದ ವಿಸ್ತರಣೆ

ನವದೆಹಲಿ: ಶ್ರೀ ಕರ್ತಾರ್‌ಪುರ್ ಸಾಹಿಬ್ ಕಾರಿಡಾರ್ ಒಪ್ಪಂದದ ಸಿಂಧುತ್ವವನ್ನು ಮತ್ತೆ 5 ವರ್ಷಗಳ ಅವಧಿಗೆ ವಿಸ್ತರಿಸಲು ಭಾರತ ಮತ್ತು ಪಾಕಿಸ್ಥಾನ ನಿರ್ಧರಿಸಿವೆ. ರಾಜತಾಂತ್ರಿಕ ಮಾರ್ಗಗಳ ಮೂಲಕ ಮಾತುಕತೆ ನಡೆಸಿ ಈ ನಿರ್ಧಾರಕ್ಕೆ ಬರಲಾಗಿದೆ. ಪಾಕಿಸ್ತಾನದ ನರೋವಾಲ್‌ನ ಗುರುದ್ವಾರಕ್ಕೆ ಭಾರತದ ಯಾತ್ರಾರ್ಥಿಗಳ ಭೇಟಿಗೆ ಅನುಕೂಲವಾಗುವಂತೆ 2019ರ ಅ.24ರಂದು ಕರ್ತಾರ್ ಪುರ್ ಸಾಹಿಬ್ ಕಾರಿಡಾರ್ ಒಪ್ಪಂದಕ್ಕೆ ಸಹಿ ಹಾಕಲಾಗಿತ್ತು. ಒಪ್ಪಂದದ ಅವಧಿಯನ್ನು 5 ವರ್ಷಗಳ ಕಾಲವಿಸ್ತರಿಸಲು 2 ದೇಶಗಳು ಒಪ್ಪಿಕೊಂಡಿವೆ.



## ನಕಲಿ ಕೋರ್ಟ್ ನಡೆಸುತ್ತಿದ್ದ ಖೊಟ್ಟಿ ಜಡ್ಜ್ : ಬಂಧನ

ಗುಜರಾತ್ : ನ್ಯಾಯಾಲಯ ವ್ಯವಸ್ಥೆಯನ್ನೇ ನಕಲು ಮಾಡಿದ ಆಘಾತಕಾರಿ ಘಟನೆ ಗುಜರಾತ್‌ನಲ್ಲಿ ಬೆಳಕಿಗೆ ಬಂದಿದೆ. ನಕಲಿ ಕೋರ್ಟ್ ಸ್ಥಾಪಿಸಿ ಪ್ರಕರಣಗಳ ತೀರ್ಪು ನೀಡುತ್ತಿದ್ದ ಖೊಟ್ಟಿ ನ್ಯಾಯಾಧೀಶನನ್ನು ಪೊಲೀಸರು ಬಂಧಿಸಿದ್ದಾರೆ. ಮೋರಿಸ್ ಸ್ಯಾಮ್ಯುಯೆಲ್ ನಕಲಿ ಟ್ರಿಬ್ಯೂನಲ್ ಸ್ಥಾಪಿಸಿ ನ್ಯಾಯಾಧೀಶನಂತೆ ತೀರ್ಪು ನೀಡುತ್ತಿದ್ದ ಆರೋಪಿ. ತನ್ನ ಕಚೇರಿಯಲ್ಲಿ ನ್ಯಾಯಾಲಯದ ಮಾದರಿಯನ್ನು ರೂಪಿಸಿದ್ದ. ತಾನೇ ಜಡ್ಜ್ ಎಂದು ಬಿಂಬಿಸಿ ಹಲವು ಪ್ರಕರಣಗಳಿಗೆ ಆದೇಶವನ್ನೂ ಹೊರಡಿಸುತ್ತಿದ್ದ. ಹೀಗೆ ಕಳೆದ 5 ವರ್ಷಗಳಿಂದ ಆತ ನಕಲಿ ಕೋರ್ಟ್ ನಡೆಸಿಕೊಂಡು ಬಂದಿದ್ದ ಎನ್ನಲಾಗಿದೆ.



## ರಷ್ಯಾ ಸೇನೆಯಿಂದ ಭಾರತೀಯರ ಬಿಡುಗಡೆ : ಕೇಂದ್ರ ಸರ್ಕಾರ

ನವದೆಹಲಿ: ಯುದ್ಧ ಮಗ್ನವಾಗಿರುವ ರಷ್ಯಾದ ಸೇನೆ ಸೇರಿಕೊಂಡಿದ್ದವರ ಪೈಕಿ 85 ಭಾರತೀಯರನ್ನು ಬಿಡುಗಡೆ ಮಾಡಲಾಗಿದೆ. ಇನ್ನೂ 20 ಮಂದಿಯನ್ನು ಬಿಡಿಸಿಕೊಂಡು ಬರುವ ಪ್ರಯತ್ನ ಸಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ರಷ್ಯಾ ಸೇನೆಯ ಪರವಾಗಿ ಯುದ್ಧ ಮಾಡಲು ಅಕ್ರಮವಾಗಿ ಅಥವಾ ಒಪ್ಪಂದದ ಮೇರೆಗೆ ಸೇರಿಕೊಂಡ ಭಾರತೀಯರ ಬಿಡುಗಡೆಗೆ ಭಾರತ ಸರ್ಕಾರ ಮನವಿ ಮಾಡಿತ್ತು. ರಷ್ಯಾ 85 ಭಾರತೀಯ ರನ್ನು ಸೇನೆಯಿಂದ ಬಿಡುಗಡೆ ಮಾಡಿದೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ತಿಳಿಸಿದ್ದಾರೆ.





ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## ಜಲದಾಳದಲ್ಲಿ ಅಡಗಿದೆ ಜಲಂಧರನ ಕಥೆ

ಪ್ರಮೋದ್ ಶೆಟ್ಟಿ ನಾಯಕರಾಗಿ ನಟಿಸಿರುವ "ಜಲಂಧರ" ಚಿತ್ರದ "ಹುಟ್ಟುತ್ತಾ ನಾವು" ಎಂಬ ಹಾಡಿನ ಲಿರಿಕಲ್ ವಿಡಿಯೋ ಜಂಕಾರ್ ಮ್ಯೂಸಿಕ್ ಯೂಟ್ಯೂಬ್ ಮೂಲಕ ಬಿಡುಗಡೆಯಾಗಿದೆ. ಮನ್ವರ್ಷಿ ನವಲಗುಂದ ಬರದಿರುವ ಈ ಹಾಡನ್ನು ಅವಿನಾಶ್ ಬಸ್ತೂರ್ ಹಾಡಿದ್ದಾರೆ. ಜತಿನ್ ದರ್ಶನ್ ಸಂಗೀತ ನೀಡಿದ್ದಾರೆ. ಪಿ.ಆರ್.ಓ ಸುಧೀಂದ್ರ ವೆಂಕಟೇಶ್ ಈ ಹಾಡನ್ನು ಬಿಡುಗಡೆ ಮಾಡಿ ಶುಭ ಹಾರೈಸಿದರು. ಜಂಕಾರ್ ಮ್ಯೂಸಿಕ್ ನ ಭರತ್ ಜೈನ್, ನಾಯಕ ಪ್ರಮೋದ್ ಶೆಟ್ಟಿ ಸಹ ಜೊತೆಗಿದ್ದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ಈ ಕಥೆಯನ್ನು ಕೊರೋನ ಪೂರ್ವದಲ್ಲಿ ಗೆಳೆಯ ಸ್ಟೆಪ್ ಆಫ್ ಲೋಕಿ ಹೇಳಿದ್ದರು. ಕಥೆ ಕೇಳಿ ತುಂಬಾ ಚೆನ್ನಾಗಿದೆ. ನಿರ್ಮಾಪಕರು ಸಿಗದಿದ್ದರೆ ನಾನೇ ನಿರ್ಮಾಣ ಮಾಡೋಣ. ನಿರ್ದೇಶನ ನಾನೇ ಮಾಡುತ್ತೇನೆ. ಆದರೆ ಸ್ವಲ್ಪ ಸಮಯ ಆಗಲಿ ಎಂದಿದ್ದೆ. ಅನಂತರ ನಿರ್ಮಾಪಕ ಮದನ್ ಅವರು ನಿರ್ಮಾಣದ ಸಾರಥ್ಯ ವಹಿಸಿಕೊಂಡರು. ನಾನು ಇದರಲ್ಲೂ ಪೊಲೀಸ್ ಅಧಿಕಾರಿ. ಆದರೆ ಗಂಭೀರವಾದ ಪಾತ್ರ. ಇದರಲ್ಲಿ ನಾನೊಬ್ಬನೇ ಹೀರೋ ಅಲ್ಲ. ಕಥೆ ಹಾಗೂ ಅಭಿನಯಿಸಿರುವ ಕಲಾವಿದರು ಎಲ್ಲಾ ನಾಯಕರೆ. ಕನಕಪುರ ಭಾಗದ ಜಾನಪದ ಕಲೆಯನ್ನು ಈ ಚಿತ್ರದಲ್ಲಿ ಬಳಸಿಕೊಳ್ಳಲಾಗಿದೆ. ಇಂದು ಬಿಡುಗಡೆ ಯಾಗಿರುವ ಹಾಡಿನ ಲ್ಲಿ ಚಿತ್ರದ ಕಥೆ ಹೇಳುವ ಪ್ರಯತ್ನ ಮಾಡಲಾಗಿದೆ. ಮನ್ವರ್ಷಿ ನವ ಲಗುಂದ ಬರೆದಿರುವ ಸಾಹಿತ್ಯ ಮನ ಮು ಟ್ಟುವಂತಿದೆ ಎಂದರು ನಾಯಕ ಪ್ರಮೋದ್ ಶೆಟ್ಟಿ. ನಾನು ಕನಕಪುರದವನು. ನೀರಿನ ಬಗ್ಗೆ ನಮ್ಮ ಅಜ್ಜಿ ಹೇಳುತ್ತಿದ್ದ ಕಥೆ, ನಾನು ಈ ಚಿತ್ರದ ಕಥೆ ಬರೆಯಲು ಸ್ಫೂರ್ತಿ. ಈ ಕಥೆಯನ್ನು ನಾನು ರಕ್ಷಿತ್ ಶೆಟ್ಟಿ ಅವರ ಸೈಟ್ ಬಳಿ ಪ್ರಮೋದ್ ಶೆಟ್ಟಿ ಅವರಿಗೆ ಹೇಳಿದ್ದೆ. ಪ್ರಮೋದ್ ಅವರು ತಕ್ಷಣ ಒಪ್ಪಿಕೊಂಡರು. ನಿರ್ಮಾಪಕರಿಗಾಗಿ ನಾನು ಇಡೀ ಬೆಂಗಳೂರು ಅಲೆದಿದ್ದೇನೆ. ಆಗ ನನಗೆ ಸಿಕ್ಕಿದ್ದು ಮದನ್ ಅವರು. ಅವರ ಜೊತೆಗೆ ಸಹ ನಿರ್ಮಾಪಕರಾದ ಚಂದ್ರಮೋಹನ್ ಸಿ.ಎಲ್., ರಮೇಶ್ ರಾಮಚಂದ್ರ, ಪದ್ಮನಾಭನ್ ಮಂಗಳೂರು ಸಹ ನಿರ್ಮಾಣಕ್ಕೆ ಜೊತೆಯಾದರು. ನಾನು ಈ ಚಿತ್ರದಲ್ಲಿ ಅಭಿನಯ ಕೂಡ ಮಾಡಿದ್ದೇನೆ. ಎಲ್ಲರ ಸಹಕಾರದಿಂದ ಚಿತ್ರ ಚೆನ್ನಾಗಿ ಬಂದಿದೆ ಎಂದರು ಕಥೆಗಾರ ಹಾಗೂ ನಟ ಸ್ಟೆಪ್ ಆಫ್ ಲೋಕಿ. ಲೋಕಿ ಅವರು ಕಥೆ ಬರೆದಿದ್ದು, ನಾನು ನಿರ್ದೇಶಿಸಿದ್ದೇನೆ. ಜೀವನ ಎಲ್ಲರಿಗೂ ಅಮೂಲ್ಯ. ಸಾವು ಹೇಗಾದರೂ ಬರಬಹುದು. ಅದರಲ್ಲೂ ಜಲದ ಹತ್ತಿರ ಹೋದಾಗ ಹುಷಾರಾಗಿರಬೇಕು. ಜೀವನದ ಬಗ್ಗೆ ಜಾಗೃತಿ ಮೂಡಿಸುವ ಸಣ್ಣ ಪ್ರಯತ್ನ ಕೂಡ ಮಾಡಿದ್ದೇವೆ. ನಮ್ಮ ಚಿತ್ರದ ಕಥೆ, ಜಲದೊಳಗಿನ ಕಥೆ. ಅಪರೂಪದ ಕಥೆ ಒಂದೊಳ್ಳೆ ಸಿನಿಮಾ ನಿರ್ದೇಶಿಸಿರುವ ಸಂತೋಷವಿದೆ. ನವೆಂಬರ್‌ನಲ್ಲಿ ಚಿತ್ರವನ್ನು ತೆರೆಗೆ ತರುವ ಸಿದ್ಧತೆ ನಡೆಯುತ್ತಿದೆ ಎಂದರು ನಿರ್ದೇಶಕ ವಿಷ್ಣು ವಿ ಪ್ರಸನ್ನ. ನಾನು ಈ ಚಿತ್ರದಲ್ಲಿ ಪ್ರಮೋದ್ ಶೆಟ್ಟಿ ಅವರ ಜೋಡಿಯಾಗಿ ನಟಿಸಿದ್ದೇನೆ ಎಂದು "ಟಗರು" ಖ್ಯಾತಿಯ ರಿಶಿಕಾ ರಾಜ್ ತಿಳಿಸಿದರು. "ಅಧ್ಯಕ್ಷ" ಖ್ಯಾತಿಯ ಆರೋಹಿತ ಗೌಡ ತಮ್ಮ ಪಾತ್ರದ ಬಗ್ಗೆ ಹೇಳಿದರು.



## "ಸಿಂಪಲ್ ಕ್ವೀನ್" ಶ್ವೇತಾ ಶ್ರೀವಾಸ್ತವ್ ಈಗ ಲೇಖಕಿ

2006ರಲ್ಲಿ "ಮುಖಾಮುಖಿ" ಚಿತ್ರದ ಮೂಲಕ ಚಿತ್ರರಂಗ ಪ್ರವೇಶಿಸಿದ ನಟಿ ಶ್ವೇತಾ ಶ್ರೀವಾಸ್ತವ್, "ಸಿಂಪಲ್ಲಾಗ್ ಒಂದ್ ಲವ್ ಸ್ಟೋರಿ", " ಕಿರಗೂರಿನ ಗಯ್ಯಾಳಿಗಳು", "ರಾಘವೇಂದ್ರ ಸ್ಟೋರ್ಸ್", "ಹೋಪ್" ಮುಂತಾದ ಚಿತ್ರಗಳ ಮೂಲಕ ಕನ್ನಡಿಗರ ಮನ ಗೆದ್ದರು. ನಟಿಯಾಗಿ ಪರಿಚಿತರಾಗಿರುವ ಶ್ವೇತಾ ಶ್ರೀವಾಸ್ತವ್ ಈಗ ಲೇಖಕಿಯಾಗಿದ್ದಾರೆ. ಎರಡು ದಶಕಗಳ ತಮ್ಮ ಸಿನಿಮಾ ಜರ್ನಿಯ ಅನುಭವಗಳನ್ನು ಪುಸ್ತಕ ರೂಪದಲ್ಲಿ ದಾಖಲಿಸಿದ್ದಾರೆ. ಈ ಪುಸ್ತಕಕ್ಕೆ "ರೆಕ್ಕೆ ಇದ್ದರೆ ಸಾಕೆ" ಎಂದು ಹೆಸರಿಟ್ಟಿದ್ದಾರೆ. ಇಂಗ್ಲಿಷ್‌ನಲ್ಲೂ (against the grain) ಈ ಪುಸ್ತಕ ಲಭ್ಯವಿದ್ದು, ಅದರ ಹೆಸರು. ಇತ್ತೀಚೆಗೆ ನಯನ ಸಭಾಂಗಣದಲ್ಲಿ ಶ್ವೇತಾ ಶ್ರೀವಾಸ್ತವ್ ಈ ಪುಸ್ತಕ ಅನಾವರಣಗೊಳಿಸಿ ಮಾಧ್ಯಮದ ಮುಂದೆ ಮಾತನಾಡಿದರು. "ಮಹಿಳೆಯರು ಸಾಧಿಸಿದ ಪ್ರಗತಿಯ ಮಟ್ಟದಿಂದ ಸಮುದಾಯದ ಪ್ರಗತಿಯನ್ನು ಅಳೆಯಬೇಕು" ಎಂದು ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಹೇಳಿದ ಮಾತಿನ ಮೂಲಕ ತಮ್ಮ ಮಾತು ಪ್ರಾರಂಭಿಸಿದ ನಟಿ ಶ್ವೇತಾ ಶ್ರೀವಾಸ್ತವ್, ಅಂಬೇಡ್ಕರ್ ಅವರು ಹೇಳಿದ ಮಾತು ಎಲ್ಲಾ ರಂಗಕ್ಕೂ ಅನ್ವಯಿಸುತ್ತದೆ. ಇನ್ನು, ಹೆಣ್ಣುಮಕ್ಕಳು ಮದುವೆ ಆದ ನಂತರ ಚಿತ್ರದಲ್ಲಿ ನಾಯಕಿಯಾಗಿ ನಟಿಸಬಾರದು ಎಂಬುದು ಎರಡು ದಶಕಗಳ ಹಿಂದೆ ನಾನು ನಟಿಸಲು ಆರಂಭಿಸಿದಾಗಲೂ ಇತ್ತು, ಈಗಲೂ ಇದೆ. ಅದಕ್ಕೆ ಕಾರಣ ಏನು? ಹೆಣ್ಣು ಸ್ವಾವಲಂಬಿ ಅಲ್ಲವೇ? ಆಕೆ ಯಾವುದೇ ಕ್ಷೇತ್ರದಲ್ಲಿ ಏನಾದರೂ ಸಾಧಿಸಬೇಕು ಎಂದರೆ, ಆಕೆ ಗಂಡ ಅಥವಾ ತಂದೆಯ ಹೆಸರನ ಜೊತೆಗೆ ಗುರುತಿಸಿಕೊಳ್ಳುತ್ತಾಳೆ. ಈ ಪರಿಸ್ಥಿತಿ ಎಲ್ಲಾ ಕಾಲದಲ್ಲೂ ಪ್ರಸ್ತುತ. ಹಾಗಂತ ನಮ್ಮ ಸಾಧನೆಗೆ ಮನೆಯವರ ಸಹಕಾರ ಬೇಡ ಅಂತ ನಾನು ಹೇಳುತ್ತಿಲ್ಲ. ವಾಸ್ತವದ ಬಗ್ಗೆ ಮಾತನಾಡುತ್ತೇನೆ ಅಷ್ಟೆ. ಸರಿಸುಮಾರು ಇಪ್ಪತ್ತು ವರ್ಷಗಳ ನನ್ನ ಸಿನಿಬದುಕನ್ನು ಸಾಧನೆ ಅಂತ ನಾನು ಕರೆದುಕೊಳ್ಳುತ್ತೇನೆ. ಈ ಸಮಯದಲ್ಲಿ ನಾನು ಎದುರಿಸಿದ ಸವಾಲುಗಳು, ಸನ್ನಿವೇಶಗಳು ಹಾಗೂ ಸಂತೋಷದ ವಿಚಾರಗಳು ಎಲ್ಲವನ್ನು ಈ ಪುಸ್ತಕದಲ್ಲಿ ಹೇಳುವ ಪ್ರಯತ್ನ ಮಾಡಿದ್ದೇನೆ. ಇದನ್ನು ಬಯೋಪಿಕ್ ಅಂತಲೂ ಕರೆಯಬಹುದು. ನಾನು ಈ ಪುಸ್ತಕವನ್ನು ಮೊದಲು ಇಂಗ್ಲಿಷ್‌ನಲ್ಲಿ ಬರೆದಿದ್ದೆ. ಆನಂತರ ತಾಯಿಭಾಷೆಯ ಬಗ್ಗೆ ನನಗೆ ಅಪಾರ ಪ್ರೀತಿ ಹಾಗೂ ಸೆಂಟಿಮೆಂಟ್. ಹೀಗಾಗಿ ಕನ್ನಡದಲ್ಲೂ ಬರೆಯೋಣ ಅನಿಸಿತು. ಪ್ರಕಾಶಕರ ಬಳಿ ಹೇಳಿದ ಅವರು ಒಪ್ಪಿಕೊಂಡರು. ಲೇಖಕಿಯಾಗಿ ಇದು ಮೊದಲ ಹೆಜ್ಜೆ. ನನ್ನ ಮನೆಯವರು, ಸ್ನೇಹಿತರು ಎಲ್ಲಾ ನಿನ್ನ ಪುಸ್ತಕ ನೀನೆ ಬಿಡುಗಡೆ ಮಾಡುತ್ತೀಯಾ? ಅತಿಥಿಗಳನ್ನು ಕರೆಯುವುದಿಲ್ಲವಾ ಎಂದರು. ಎಲ್ಲರೂ ಮಾಡುವ ರೀತಿ ಮಾಡುವುದು ಬೇಡ ಎಂಬುದು ನನ್ನ ಉದ್ದೇಶವಾಗಿತ್ತು. ಮುಂದೊಂದು ದಿನ ಅದ್ದೂರಿ ಸಮಾರಂಭ ಆಯೋಜಿಸುತ್ತೇನೆ ಎಂದರು.



## ಪ್ಯಾನ್ ಇಂಡಿಯನ್ ಸ್ಟಾರ್ ಪ್ರಭಾಸ್‌ಗೆ ಹ್ಯಾಪಿ ಬರ್ತ್‌ಡೇ

ಟಾಲಿವುಡ್ ನಟ ಪ್ರಭಾಸ್‌ಗೆ ಇದೀಗ ಬರ್ತ್‌ಡೇ ಸಂಭ್ರಮದಲ್ಲಿದ್ದಾರೆ. ಪ್ಯಾನ್ ಇಂಡಿಯಾ ಸ್ಟಾರ್‌ಡಮ್‌ಗೆ ಮತ್ತೊಂದು ಮೆರುಗು ನೀಡಿದರು ಈ ತೆಲುಗು ನಟ. ಸೌತ್ ಇಂಡಸ್ಟ್ರಿಯಲ್ಲಿ ತಮ್ಮದೇ ಆದ ಖ್ಯಾತಿ ಗಿಟ್ಟಿಸಿಕೊಂಡು, ದೇಶವ್ಯಾಪಿ ಹೆಸರು ಮಾಡಿದ್ದಾರೆ. ಬಾಕ್ಸ್ ಆಫೀಸ್‌ನಲ್ಲಿ ನಟ ಪ್ರಭಾಸ್ ಅವರ ಸಿನಿಮಾಗಳು ಮಾಡಿದ ಮೋಡಿಯೂ ಸಣ್ಣದೇನಲ್ಲ. ಹಲವು ದಾಖಲೆಗಳನ್ನೂ ಸೃಷ್ಟಿಸಿದ್ದಾರೆ. ಇದೀಗ ಇದೇ ಬರ್ತ್‌ಡೇ ಬಾಯ್ ಅವರ ಈ ಸಕ್ಸಸ್ ಜರ್ನಿ ಹೇಗಿತ್ತು ಇಲ್ಲಿದೆ ನೋಡಿ. **ಬಾಕ್ಸ್ ಆಫೀಸ್ ದಾಖಲೆ :** ಪ್ರಭಾಸ್ ಅವರ ಸಿನಿಮಾಗಳು ತಮ್ಮ ಸಿನಿಮಾಗಳ ದಾಖಲೆಯನ್ನೇ ದಿನದಿಂದ ದಿನಕ್ಕೆ ಮುರಿದು ಮುನ್ನಡೆಯುತ್ತಿವೆ. **ಬಾಹುಬಲಿ:** ದಿ ಬಿಗಿನಿಂಗ್ ಮೊದಲ ದಿನ 75ಕೋಟಿ ಗಳಿಸಿ ಇತಿಹಾಸ ನಿರ್ಮಿಸಿತು. ಇದರ ನಂತರ **ಬಾಹುಬಲಿ :** ದಿ ಕನ್‌ಕ್ಲೂಷನ್, ಬಾಕ್ಸ್ ಆಫೀಸ್‌ನಲ್ಲಿ ಬೆರಗುಗೊಳಿಸುವ ಮೂಲಕ ಮೊದಲ ದಿನ 200 ಕೋಟಿ ಗಳಿಸಿತು. ಸಾಹೋ ಮೊದಲ ದಿನ 130 ಕೋಟಿ ಗಳಿಸಿದರೆ, ಸಲಾರ್ 178 ಕೋಟಿ ಕಲೆಕ್ಷನ್ ಮಾಡಿತು. ಕಲ್ಕಿ 2898AD 180ಕೋಟಿ ಗಳಿಸಿ ಗಲ್ಲಾಪೆಟ್ಟಿಗೆಯಲ್ಲಿ ಸೂಪರ್ ಹಿಟ್ ಆಯಿತು. ಕಲ್ಕಿಯಿಂದ ಮುಂದುವರಿದ ಯಶಸ್ಸು ಇತ್ತೀಚೆಗೆ ಬಿಡುಗಡೆಯಾದ ನಾಗ್ ಅಶ್ವಿನ್ ನಿರ್ದೇಶನದ ಕಲ್ಕಿ 2898AD ಸಿನಿಮಾ, ದೊಡ್ಡ ಮಟ್ಟದ ಯಶಸ್ಸು ಕಂಡ ಸಿನಿಮಾ. ವಿಶ್ವಾದ್ಯಂತ 1100 ಕೋಟಿಗಳನ್ನು ಗಳಿಸಿ, ಜಾಗತಿಕ ಸಿನಿಮೀಯ ಐಕಾನ್ ಆಗಿ ಪ್ರಭಾಸ್ ಸ್ಥಾನವನ್ನು ಭದ್ರಪಡಿಸಿದೆ. ಈ ಚಿತ್ರವು ಮೊದಲ ವಾರಾಂತ್ಯದಲ್ಲಿ 500 ಕೋಟಿಗೂ ಅಧಿಕ ಕಲೆಕ್ಷನ್ ಮಾಡಿ, ಹೊಸ ದಾಖಲೆ ಬರೆಯಿತು. ಜಾಗತಿಕ ಮಟ್ಟದಲ್ಲಿಯೂ ಮಿಂಚು. ದೇಶಿಯ ಮಾರುಕಟ್ಟೆಯಲ್ಲಿ ಮಾತ್ರವಲ್ಲದೆ, ವಿದೇಶದಲ್ಲಿಯೂ ಪ್ರಭಾಸ್ ಸಿನಿಮಾಗಳಿಗೆ ಬೇಡಿಕೆ ಇವೆ. ಬಾಹುಬಲಿ 2: ದಿ ಕನ್‌ಕ್ಲೂಷನ್ ಸಿನಿಮಾ ವಿದೇಶದಲ್ಲಿ 396.5 ಕೋಟಿ ಕಲೆಕ್ಷನ್ ಮಾಡಿದ್ದರೆ, ಕಲ್ಕಿ ಅಂತರಾಷ್ಟ್ರೀಯ ಮಟ್ಟದಲ್ಲಿ 275.4ಕೋಟಿ ಗಳಿಸಿದೆ. ಸಲಾರ್: ಭಾಗ 1 –ಸೀಸ್ ಫೈರ್ 137.8 ಕೋಟಿ ಕಲೆಕ್ಷನ್ ಮಾಡಿದೆ. ಅದೇ ರೀತಿ ಸಾಹೋ ಸಿನಿಮಾ 78.5 ಕೋಟಿಗಳನ್ನು ಗಳಿಸಿತು. ಈ ಮೂಲಕ ಗಡಿ ಮೀರಿ ಮುಂದಡಿ ಇರಿಸಿದ್ದಾರೆ ಪ್ರಭಾಸ್. ಪ್ರಭಾಸ್ ಮುಂಬರುವ ಸಿನಿಮಾಗಳು ಸಲಾರ್ 2: ಶೌರ್ಯಂಗ ಪರ್ವಂ" ಪ್ರಶಾಂತ್ ನೀಲ್ ಬರೆದು ನಿರ್ದೇಶಿಸಲಿರುವ ಹೈ–ವೋಲ್ಟೇಜ್ ಆಕ್ಷನ್ ಡ್ರಾಮಾ ಚಿತ್ರವಾಗಿದ್ದು, ಹೊಂಬಾಳೆ ಫಿಲಂಸ್ ಅಡಿಯಲ್ಲಿ ವಿಜಯ್ ಕಿರಗಂದೂರು ನಿರ್ಮಿಸುತ್ತಿದ್ದಾರೆ. ಈ ಚಿತ್ರದಲ್ಲಿ ಪ್ರಭಾಸ್ ಶೀರ್ಷಿಕೆ ಪಾತ್ರದಲ್ಲಿ ನಟಿಸಿದ್ದಾರೆ.



## 'ದೇವರು ರುಜು ಮಾಡಿದನು' ಸಿನಿಮಾದ ಮುಹೂರ್ತ ಸಂಭ್ರಮ

ನಿರ್ದೇಶಕ ಸಿಂಪಲ್ ಸುನಿ ಹೊಸ ಸಿನಿಮಾ "ದೇವರು ರುಜು ಮಾಡಿದನು". ಇಂದು ಈ ಚಿತ್ರ ಅದ್ದೂರಿಯಾಗಿ ಸೆಟ್ಟೇರಿದೆ. ಬೆಂಗಳೂರಿನ ಖಾಸಗಿ ಹೋಟೆಲ್ ನಲ್ಲಿ ದೇವರು ರುಜು ಮಾಡಿದನು ಸಿನಿಮಾದ ಮುಹೂರ್ತ ನೆರವೇರಿದೆ. ಗ್ರೀನ್ ಹೌಸ್ ಮಾಲೀಕರಾದ ವಾಸು ಚಿತ್ರದ ಮೊದಲ ದೃಶ್ಯಕ್ಕೆ ಕ್ಲ್ಯಾಪ್ ಮಾಡಿದರು. ನಾಯಕ ವೀರಾಜ್ ಅಜ್ಜಿ ಕ್ಯಾಮೆರಾಗೆ ಚಾಲನೆ ನೀಡಿದರು.ಈ ಚಿತ್ರದ ಮೂಲಕ ಯುವ ನಟ ವೀರಾಜ್ ಕನ್ನಡ ಚಿತ್ರರಂಗಕ್ಕೆ ಎಂಟ್ರಿ ಕೊಡುತ್ತಿದ್ದಾರೆ. ದೇವರು ರುಜು ಮಾಡಿದನು ಎಂಬ ಕ್ಯಾಚಿ ಟೈಟಲ್ ಮೂಲಕ ಕಿಕ್ ಕೊಟ್ಟಿದ್ದ ಸುನಿ ಟೈಟಲ್ ಟೀಸರ್ ಬಿಟ್ಟು ನಿರೀಕ್ಷೆಯನ್ನು ಇಮ್ಮಡಿಗೊಳಿಸಿದ್ದಾರೆ. ಸಂಗೀತವೇ ಉಸಿರು ಎಂದು ಜೀವಿಸುವ ಇಬ್ಬರು ನಾಯಕಿರು ಹಾಗೂ ಸಂಗೀತ ಇಷ್ಟವಿಲ್ಲದಿದ್ದರೂ ಅದನ್ನು ಪ್ರೀತಿಸುವ ನಾಯಕ. ಒಂದೇ ಮಾತಿನಲ್ಲಿ ಹೇಳುವುದಾದರೆ ಸೊಗಸಾದ ಸಂಗೀತದ ಕಥೆ ಜೊತೆಗೆ ರಕ್ತ ಚರಿತ್ರೆಯನ್ನು ಸುನಿ ಹೇಳೋದಿಕ್ಕೆ ಹೊರಟಿದ್ದಾರೆ. ದೇವರು ರುಜು ಮಾಡಿದನು ಟೀಸರ್ ಬಹಳ ಇಂಪ್ರೆಸಿವ್ ಆಗಿದೆ. ಕ್ಯಾಮೆರಾ ವರ್ಕ್, ಅದ್ಭುತ ಸಂಗೀತ, ನಾಯಕ ವೀರಾಜ್, ನಾಯಕಿಯರಾದ ಕೀರ್ತಿ ಕೃಷ್ಣ ಹಾಗೂ ದಿವಿತಾ ರೈ ಅಭಿನಯಕ್ಕೆ ಟೀಸರ್ ತೂಕ ಹೆಚ್ಚಿಸಿದೆ. ಮುಹೂರ್ತದ ಬಳಿಕ ಮಾತನಾಡಿದ ನಾಯಕ ವೀರಾಜ್, ತುಂಬಾ ಖುಷಿಯಾಗುತ್ತಿದೆ. ಈ ಮುಹೂರ್ತ ಸಮಾರಂಭ ನನ್ನ ಜೀವನದ ಒಂದಲ್ಲ, ಎರಡಲ್ಲ ಎಷ್ಟೋ ವರ್ಷದ ಕನಸು. ಚಿಕ್ಕವನಿದ್ದಾಗಿನಿಂದಲೂ ನಟನಾಗಬೇಕು ಎಂಬ ಆಸೆ ನನ್ನಲ್ಲಿತ್ತು. ಸ್ಕೂಲ್ ಟೀಚರ್ಸ್ ಡ್ಯಾನ್ಸ್, ಆಕ್ಟಿಂಗ್ ಮಾಡು ಎಂದು ಹೇಳುತ್ತಿದ್ದರು. ನಾನು ಆಗ ಮಾಡುತ್ತಿದ್ದೆ. ಆಗ ನನ್ನ ಫ್ರೆಂಡ್ಸ್ ಚಪ್ಪಾಳೆ ತಟ್ಟುತ್ತಿದ್ದರು. ಆಗ ಇದೇನೂ ಕಿಕ್ ಇದೆಯಲ್ಲಾ, ಸಖತ್ ಇದೆ ಎನಿಸುವುದು. ಕಲಾವಿದರಿಗೆ ಇದೆ ಬೇಕಿರುವುದು. ಜನ ಕೊಡುವ ರೆಸ್ಪಾನ್ಸ್ ಅದು ವಂಡರ್ ಫುಲ್. ಅಂದಿನಿಂದ ನನ್ನ ಪಯಣ ಶುರುವಾಯ್ತು. ಜನರಿಗೆ ಏನಾದರೂ ಮಾಡಬೇಕು. ನನಗೆ ಇಷ್ಟವಾಗಿದ್ದನ್ನು ಮಾಡಬೇಕು ಅಂತಾ ಅನಿಸಿತು ಎಂದರು.



## S/O ಮುತ್ತಣ್ಣನಿಗೆ ಸಾಥ್ ಕೊಡಲಿರುವ ಸನ್ ಆಫ್ ಮುತ್ತುರಾಜ

ದೇವರಾಜ್ ಎರಡನೇ ಪುತ್ರ ಯಂಗ್ ಡೈನಾಮಿಕ್ ಪ್ರಣಂ ದೇವರಾಜ್ ನಟನೆಯ ಬಹುನಿರೀಕ್ಷಿತ ಸಿನಿಮಾ S/o ಮುತ್ತಣ್ಣ. ಟೈಟಲ್ ಹಾಗೂ ಪೋಸ್ಟರ್‌ನಿಂದಲೇ ಕುತೂಹಲ ಹೆಚ್ಚಿಸಿರುವ ಈ ಚಿತ್ರದ ಆಡಿಯೋ ಹಕ್ಕು ಒಳ್ಳೆ ಮೊತ್ತಕ್ಕೆ ಬಿಕರಿಯಾಗಿದೆ. ಇದೀಗ ಸನ್ ಆಫ್ ಮುತ್ತಣ್ಣ ಬಳಗದಿಂದ ಹೊಸ ಅಪ್ ಡೇಟ್ ಸಿಕ್ಕಿದೆ. ಸನ್ ಆಫ್ ಮುತ್ತುರಾಜ್ ಸನ್ ಆಫ್ ಮುತ್ತಣ್ಣನಿಗೆ ಸಾಥ್ ಕೊಡುತ್ತಿದ್ದಾರೆ. ಇದೇ 23ರಂದು ಚಿತ್ರದ ಟೀಸರ್ ರಿಲೀಸ್ ಮಾಡಿ ಶಿವಣ್ಣ ಇಡೀ ತಂಡಕ್ಕೆ ಶುಭ ಹಾರೈಸಲಿದ್ದಾರೆ. ಶ್ರೀಕಾಂತ್ ಹುಣಸೂರು ನಿರ್ದೇಶಿಸುತ್ತಿರುವ "ಸನ್ ಆಫ್ ಮುತ್ತಣ್ಣ' ಸಿನಿಮಾದಲ್ಲಿ ಪ್ರಣಂ ದೇವರಾಜ್ ಅವರಿಗೆ ಖುಷಿ ರವಿ ನಾಯಕಿಯಾಗಿ ಜೋಡಿಯಾಗುತ್ತಿದ್ದಾರೆ. ರಂಗಾಯಣ ರಘು ನಾಯಕನ ತಂದೆಯ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಉಳಿದಂತೆ ಸುಚೇಂದ್ರ ಪ್ರಸಾದ್, ಗಿರೀಶ್ ಶಿವಣ್ಣ, ತಬಲ ನಾಣಿ, ಶ್ರೀನಿವಾಸ್ ಪ್ರಭು, ಸುಧಾ ಬೆಳವಾಡಿ, ಅರುಣ್ ಚಕ್ರವರ್ತಿ ಮುಂತಾದವರು ಸಿನಿಮಾದ ಇತರ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸುತ್ತಿದ್ದಾರೆ. ಟೈಟಲ್ ಹೇಳುವಂತೆ ಇದು ಅಪ್ಪ–ಮಗನ ಬಾಂಧವ್ಯದ ಕಥೆಯಾಗಿದೆ.



## 24ರಂದು ಕೋಮಲ್ ಕುಮಾರರ "ಯಲಾಕುನ್ನಿ" ತೆರೆಗೆ

ಸೌಂದರ್ಯ ಸಿನಿ ಕಂಬೈನ್ಸ್ ಹಾಗೂ ನರಸಿಂಹ ಸಿನಿಮಾಸ್ ಲಾಂಛನದಲ್ಲಿ ಅನುಸೂಯ ಕೋಮಲ್ ಕುಮಾರ್, ಸಹನ ಮೂರ್ತಿರವರು ನಿರ್ಮಿಸಿರುವ ತಮ್ಮ ಅಮೋಘ ಅಭಿನಯದ ಮೂಲಕ ಜನರ ಮನ ಗೆದ್ದಿರುವ ಕೋಮಲ್ ಕುಮಾರ್ ನಾಯಕರಾಗಿ ನಟಿಸಿರುವ ಹಾಗೂ ಹೊಸ ಪ್ರತಿಭೆ ಎನ್.ಆರ್. ಪ್ರದೀಪ್ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡಿರುವ "ಯಲಾಕುನ್ನಿ" ಚಿತ್ರ ಈ ವಾರ ಅಕ್ಟೋ.25ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಕೋಮಲ್ ಕುಮಾರ್ ಮೊದಲ ಬಾರಿಗೆ ದ್ವಿಪಾತ್ರದಲ್ಲಿ ಕಾಣಿಸಿಕೊಂಡಿರುವುದು ಈ ಚಿತ್ರದ ವಿಶೇಷ. ಕೋಮಲ್ ಕನ್ನಡದ ಹೆಸರಾಂತ ನಟ ವಜ್ರಮುನಿ ಅವರ ಗೆಟಪ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಈ ಲುಕ್‌ಗೆ ಅಭಿಮಾನಿಗಳು ಫಿದಾ ಆಗಿದ್ದಾರೆ. ದೊಡ್ಡ ದೊಡ್ಡ ಕಲಾವಿದರ ದಂಡೆ ಈ ಚಿತ್ರದಲ್ಲಿದೆ. ಈ ಚಿತ್ರದ ನಾಯಕಿಯರಾಗಿ ನಿಸರ್ಗ ಅಪ್ಪಣ್ಣ ಮತ್ತು ಗಿಚ್ಚಿಗಿಲಿಯ ಅಮೃತಾ ಬಣ್ಣ ಹಚ್ಚಿದ್ದಾರೆ. ವಿಶೇಷವಾಗಿ ವಜ್ರಮುನಿಯವರ ಮೊಮ್ಮಗ ಆಕರ್ಶ್ ಮೊದಲ ಬಾರಿಗೆ ಬಣ್ಣದ ಲೋಕ ಪ್ರವೇಶಿಸುತ್ತಿದ್ದಾರೆ.



## ಕನ್ನಡದ ಹುಡ್ಗನ ಪ್ರೀತಿಯಲ್ಲಿ ಬಿದ್ದ ಮರಾಠಿ ಹುಡ್ಗಿ

ಆರಂಭದಿಂದ ಇಲ್ಲಿಯವರೆಗೂ ನಾನಾ ರೀತಿಯಲ್ಲಿ ಭರವಸೆ ಮೂಡಿಸುತ್ತಾ ಬಂದಿರುವ ಸಿನಿಮಾ ಎಲ್ಲೋ ಜೋಗಪ್ಪ ನಿನ್ನರಮನೆ. ಹೌದಾ ಹುಲಿಯಾ ಹಾಡಿಗೆ ಭರಪೂರ ಮೆಚ್ಚುಗೆ ಸಿಕ್ಕ ಬೆನ್ನಲ್ಲೇ ಚಿತ್ರತಂಡ ಎರಡನೇ ಹಾಡನ್ನು ಅನಾವರಣ ಮಾಡಿದೆ. ಜಾಂಕರ್ ಮ್ಯೂಸಿಕ್ ಯೂಟ್ಯೂಬ್‌ನಲ್ಲಿ ಜಾಣಮರಿ ಗೀತೆ ಬಿಡುಗಡೆ ಮಾಡಲಾಗಿದೆ. ಪ್ರಮೋದ್ ಮರವಂತೆ ಕ್ಯಾಚಿ ವ್ಯಾಚಿ ಪದಗಳನ್ನು ಪೋಣಿಸಿ ಸಾಹಿತ್ಯ ಬರೆದಿದ್ದು, ಖ್ಯಾತ ಗಾಯಕಿ ರಕ್ಷಿತಾ ಸುರೇಶ್ ಹಾಗೂ ವಿಶಾಕ್ ನಾಗಲಾಪುರ ಧ್ವನಿಯಾಗಿದ್ದಾರೆ. ಜಾಣಮರಿ ಪ್ರೇಮಗೀತೆಗೆ ಶಿಯೋವ್ ಟ್ಯೂನ್ ಹಾಕಿದ್ದಾರೆ. ಹಾಡಿನಲ್ಲಿ ಅಂಜನ್ ನಾಗೇಂದ್ರ, ವೆನ್ಯಾ ರೈ ಜೋಡಿಯಾಗಿ ಮಿಂಚಿದ್ದಾರೆ. ಕನ್ನಡ ಹುಡ್ಗನಾಗಿ ಅಂಜನ್ ಕಾಣಿಸಿಕೊಂಡ್ರೆ, ವೆನ್ಯಾ ರೈ ಮರಾಠಿ ಹುಡ್ಗಿಯಾಗಿ ಅಭಿನಯಿಸಿದ್ದಾರೆ. ಮಹಾರಾಷ್ಟ್ರದ ಪಂಢರಪುರದಲ್ಲಿ ಇಡೀ ಹಾಡನ್ನು ಚಿತ್ರೀಕರಣ ಮಾಡಿರುವುದು ವಿಶೇಷ. ನಾಯಕ ಹಾಗೂ ನಾಯಕಿ ನಡುವಿನ ಸುಮಧುರ ಪ್ರೇಮಗೀತೆ ಇದಾಗಿದ್ದು, ಸಂಗೀತ ಪ್ರಿಯರನ್ನು ಗುನುಗುವಂತೆ ಮಾಡಿದೆ. ಚಿತ್ರದಲ್ಲಿ ಸಂಜನಾದಾಸ್ ಕೂಡ ಒಂದು ಪ್ರಮುಖ ಪಾತ್ರ ನಿಭಾಯಿಸುತ್ತಿದ್ದಾರೆ. ಬಿರಾದರ್, ಶರತ್ ಲೋಹಿತಾಶ್ವ, ದಾನಪ್ಪ, ಸ್ವಾತಿ, ದಿನೇಶ್ ಮಂಗಳೂರು, ಲಕ್ಷ್ಮೀ ನಾಡಗೌಡ ಮುಂತಾದವರು ಕೂಡ ಈ ಸಿನಿಮಾದಲ್ಲಿ ನಟಿಸಿದ್ದಾರೆ.



## 24ರಂದು ತೆರೆಗೆ "ಮೂಕ ಜೀವ"

ಜೆ.ಎಂ. ಪ್ರಹ್ಲಾದ್ ಅವರ ಕಾದಂಬರಿ ಆಧಾರಿತ ಚಲನಚಿತ್ರ "ಮೂಕ ಜೀವ" ಈ ವಾರ ಬಿಡುಗಡೆಯಾಗುತ್ತಿದೆ. ಹಳ್ಳಿಯ ಬಡ ಕುಟುಂಬದಲ್ಲಿ ಪ್ರಾರಂಭವಾಗುವ ಈ ಕಥೆ ಪಟ್ಟಣದಲ್ಲಿ ಅಂತ್ಯವಾಗುತ್ತದೆ. ಯಾವುದೇ ವ್ಯಕ್ತಿ ತಾನು ಸ್ವಾವಲಂಬಿಯಾಗಿ ಬದುಕಲು ಬೇಕಾದ ಸಹಾಯ, ಮಾರ್ಗದರ್ಶನ ಮತ್ತು ಸಹಾಯ ಪಡೆಯುವ ವ್ಯಕ್ತಿಯು ಸ್ಪಂದಿಸುವ ರೀತಿಯನ್ನು ಎಳೆಎಳೆಯಾಗಿ ತೆರೆದಿಡುವ ಪ್ರಯತ್ನವನ್ನು ಈ ಚಲನಚಿತ್ರದಲ್ಲಿ ಮಾಡಲಾಗಿದೆ. ಹಳ್ಳಿಯಲ್ಲಿ ಜೀವಿಸುತ್ತಿರುವ ಒಂದು ಬಡ ಕುಟುಂಬದ ಕಥೆ ಮೂಕ ಜೀವ. ಮನೆಗೆ ಆಸರೆಯಾಗಿ ಇರಬೇಕಿದ್ದ ತಂದೆ ಇಲ್ಲದ ಕುಟುಂಬ ಇವರದು. ಬಡತನದ ಬೇಗೆ ಮಗನ ಪರಿಸ್ಥಿತಿ ಹೀಗೆ, ಇದರ ನಡುವೆ ಕುಟುಂಬ ಜೀವನವನ್ನು ನಡೆಸುತ್ತಿದೆ. ಅಂಗವಿಕಲ ವ್ಯಕ್ತಿಗಳಿಗೆ ತಮ್ಮ ಅಂಗವಿಕಲತೆಯೇ ನ್ಯೂನತೆ ಎಂದು ಭಾವಿಸದೆ ಅದರ ಜೊತೆಗೆ ಸಮಾಜದಲ್ಲಿ ತಾವು ಎಲ್ಲರಂತೆ ಬದುಕಬಹುದು ಎಂಬ ಆತ್ಮಸ್ಥೈರ್ಯವನ್ನು ತುಂಬುವ ಕಥಾ ಹಂದರವನ್ನು ಹೇಳುವ ಚಲನಚಿತ್ರವೇ ಮೂಕಜೀವ. ನಿರ್ಮಾಪಕರಾದ ಎಂ.ವೆಂಕಟೇಶ ಮತ್ತು ಶ್ರೀಮತಿ ಮಂಜುಳಾ ಈ ಚಲನಚಿತ್ರವನ್ನು ಎ.ವಿ.ಎವ್ ಎಂಟರ್ ಟೈನರ್ಸ್ ಸಂಸ್ಥೆಯ ಮೂಲಕ ನಿರ್ಮಾಣ ಮಾಡಿದ್ದಾರೆ.



## ಸಿನಿಮಾಸಕ್ತರಿಗೆ ಕಲಾತ್ಮಕ ಅಕಾಡೆಮಿಯಿಂದ ತರಬೇತಿ

ರಿಲೈಫ್ ಪ್ರೊಡಕ್ಷನ್ ಪ್ರೈವೇಟ್ ಲಿಮಿಟೆಡ್ ಅರ್ಪಿಸುವ ಕಲಾತ್ಮಕ ಫಿಲಂ–ಸ್ಟೇಜ್ ಅಕಾಡೆಮಿ ವತಿಯಿಂದ ಅ.5 ಹಾಗೂ 6ರಂದು ಎರಡು ದಿನಗಳ ಅಲ್ಪಾವಧಿಯ "ಅಭಿನಯ ಕಾರ್ಯಗಾರ"ವನ್ನು ಬೆಂಗಳೂರಿನ ಕೆಂಗೇರಿಯ ಕೊಮ್ಮಘಟ್ಟ ಚತುರ್ಥಿ ಫಾರ್ಮ್ಸ್‌ನಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಗಾರದಲ್ಲಿ ರಂಗಭೂಮಿ ಕಿರುತೆರೆ ಹಾಗೂ ಸಿನಿಮಾಗಳಲ್ಲಿ ಅಭಿನಯದ ಬಗ್ಗೆ, ಚಿತ್ರರಂಗದ ವಿವಿಧ ಆಯಾಮಗಳು ಮೊದಲಾದ ವಿಚಾರಗಳಲ್ಲಿ ನಟನೆಯ ಕುರಿತು ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿತ್ತು. ರಂಗಭೂಮಿ ಕಿರುತೆರೆ ಹಾಗೂ ಬೆಳ್ಳಿತೆರೆಯ ಹಿರಿಯ ಕಲಾವಿದರಾದ ಕ.ಸುಚೇಂದ್ರ ಪ್ರಸಾದ್ ಕಲಾತ್ಮಕ ಫಿಲಂ–ಸ್ಟೇಜ್ ಅಕಾಡೆಮಿಯ ದಿಗ್ದರ್ಶಕರಾಗಿದ್ದು, ನಟನೆ, ಶಾಸ್ತ್ರೀಯ ಅಭಿನಯದ ಬಗ್ಗೆ ಎರಡು ದಿನದ ಕಾರ್ಯಗಾರವನ್ನು ನಡೆಸಿಕೊಟ್ಟರು.



## ಶಿವ ಕಾರ್ತಿಕೇಯನ್ ಅಮರನ್ ಟ್ರೇಲರ್ ರಿಲೀಸ್

ಕಾಲಿವುಡ್ ನಟ ಶಿವಕಾರ್ತಿಕೇಯನ್ ನಟನೆಯ ಬಹುನಿರೀಕ್ಷಿತ ಪ್ಯಾನ್ ಇಂಡಿಯಾ ಸಿನಿಮಾ ಅಮರನ್. ಅಮರನ್, ಭಯೋತ್ಪಾದಕ ದಾಳಿಯಲ್ಲಿ ವೀರ ಮರಣವನ್ನಪ್ಪಿದ ಮೇಜರ್ ಮುಕುಂದ್ ವರದರಾಜನ್ ಜೀವನ ಚರಿತ್ರೆಯಾಗಿದೆ. ಈ ಚಿತ್ರದ ಟ್ರೇಲರ್ ಬಿಡುಗಡೆಯಾಗಿದೆ. ಕನ್ನಡದಲ್ಲಿಯೂ ಟ್ರೇಲರ್ ರಿಲೀಸ್ ಆಗಿದೆ. ಎಮೋಷನ್ ಜೊತೆಗೆ ಆಕ್ಷನ್ ಅಂಶಗಳನ್ನು ಬ್ಲೆಂಡ್ ಮಾಡಿ ಟ್ರೇಲರ್ ಕಟ್ ಮಾಡಲಾಗಿದೆ. ಸೇನಾ ರಜೆಯಲ್ಲಿ ಮನೆಗೆ ಬಂದಿರುವ ಯೋಧ ತನ್ನ ಮಗಳೊಂದಿಗೆ ಇರುವ ಕ್ಷಣ, ಮಗಳಿಗೆ ಒಂದು ಪ್ರೀತಿಯ ಅಪ್ಪುಗೆ ಕೊಟ್ಟು ಮತ್ತೆ ದೇಶ ಸೇವೆಗೆ ಹೋಗುವ ದೃಶ್ಯ, ನಮ್ಮನ್ನು ಬಿಟ್ಟು ನೀನು ದೂರ ಆಗಿದ್ರೂ ಪರವಾಗಿಲ್ಲ, ಸೇಫ್ ಆಗಿರು ಎನ್ನುವ ಪತ್ನಿ ಡೈಲಾಗ್ ನೋಡುಗರಿಗೆ ಕಾಡುತ್ತದೆ. ಶಿವಕಾರ್ತಿಕೇಯನ್ ಮೇಜರ್ ಮುಕುಂದ್ ವರದರಾಜನ್ ಪಾತ್ರದಲ್ಲಿ ಜೀವಿಸಿದ್ದಾರೆ. ಸಾಯಿ ಪಲ್ಲವಿ, ಅವರ ಪತ್ನಿ ಇಂದೂ ರೆಬೆಕಾ ವರ್ಗೀಸ್ ಪಾತ್ರದಲ್ಲಿ ನಟಿಸಿದ್ದಾರೆ. ಭುವನ್ ಅರೋರಾ, ರಾಹುಲ್ ಬೋಸ್ ಮುಂತಾದವರು ನಟಿಸಿದ್ದಾರೆ. ಅದರಲ್ಲಿನ ಅಂಶಗಳನ್ನು ತೆಗೆದುಕೊಂಡು ನಿರ್ದೇಶಕ ರಾಜ್‌ಕುಮಾರ್ ಪೆರಿಯಸಾಮಿ ಕಥೆ ಬರೆದು, ನಿರ್ದೇಶಿಸಿದ್ದಾರೆ.



ಕರಾವಳಿ ತರಂಗಿಣಿ



# ಸಿನಿ ತರಂಗಿಣಿ

## "ಬಡವ್ರ ಮಕ್ಕಳು ಬೆಳಿಬೇಕು ಕಣ್ರಯ್ಯ"



ಶ್ರೀ ರಾಮಪ್ರೊಡಕ್ಷನ್ ಬ್ಯಾನರ್ ಅಡಿಯಲ್ಲಿ ಸಿ ಎಸ್ ವೆಂಕಟೇಶರವರ ನಿರ್ಮಾಣದ, ಶೀರ್ಷಿಕೆಯಲ್ಲೇ ಕುತೂಹಲ ಮೂಡಿಸಿರುವ "ಬಡವ್ರ ಮಕ್ಕಳು ಬೆಳಿಬೇಕು ಕಣ್ರಯ್ಯ" ಚಿತ್ರದ ಚಿತ್ರೀಕರಣ ಮುಕ್ತಾಯಗೊಂಡಿದೆ. ನವಂಬರ್ 10ರಂದು ಟ್ರೇಲರ್ ಬಿಡುಗಡೆಯಾಗುತ್ತಿದೆ. ಮಂಜು ಕವಿ ಅವರು ಸಾಹಿತ್ಯ, ಸಂಭಾಷಣೆ ಬರೆದು ಸಂಗೀತ ಸಂಯೋಜನೆಯೊಂದಿಗೆ ನಿರ್ದೇಶನವನ್ನೂ ಮಾಡಿದ್ದು, ಎಸ್ ಜೆ ಸಂಜಯ್, ಗಿರೀಶ್ ಸಾಕಿ, ಸಂಗೀತ ಶೆಟ್ಟಿ ನಿರ್ದೇಶನ ತಂಡದಲ್ಲಿದ್ದಾರೆ. ರೇಣು ಕುಮಾರ್ ಛಾಯಾಗ್ರಹಣ, ಕರಣ್ ಕುಮಾರ್, ವೆಂಕಿ ಯುಡಿಐ ಸಂಕಲನವಿರುವ ಈ ಚಿತ್ರಕ್ಕೆ ನಂದ ಮಾಸ್ಟರ್, ಮೈಸೂರು ರಾಜು ನೃತ್ಯ ನಿರ್ದೇಶನವಿದೆ. ಚಿತ್ರದಲ್ಲಿ ನಾಲ್ಕು ಹಾಡುಗಳಿದ್ದು ರವೀಂದ್ರ ಸೊರಗಾವಿ, ಅನುರಾಧ ಭಟ್, ಕೈಲಾಶ್ ಕೇರ್ ಧ್ವನಿ ನೀಡಿದ್ದಾರೆ.

## ಮುಕ್ತಾಯದ ಹಂತದಲ್ಲಿ 'ಫಾದರ್'



ಕರ್ನಾಟಕ ರಾಜ್ಯದ ಮುಖ್ಯಮಂತ್ರಿ ಸಿದ್ಧರಾಮಯ್ಯನವರಿಂದ 5 ಸಿನಿಮಾಗಳ ಟೈಟಲ್ ಲಾಂಚ್ ಮಾಡಿಸಿ ಸದ್ದು ಮಾಡಿದ್ದ ನಿರ್ಮಾಪಕ ಕಮ್ ನಿರ್ದೇಶಕ ಆರ್. ಚಂದ್ರು ನುಡಿದಂತೆ ಐದು ಸಿನಿಮಾಗಳಲ್ಲಿ ಮೊದಲನೆದಾಗಿ ಫಾದರ್ ಸಿನಿಮಾದ ಶೂಟಿಂಗ್ ಮುಕ್ತಾಯದ ಹಂತಕ್ಕೆ ತಂದು ನಿಲ್ಲಿಸಿದ್ದಾರೆ.. ರಾಜ್ ಮೋಹನ್ ನಿರ್ದೇಶನದಲ್ಲಿ ಫಾದರ್ ಸಿನಿಮಾ ಮೂಡಿ ಬರುತ್ತಿದ್ದು ಕೊನೆಯ ಹಂತದ ಶೂಟಿಂಗ್ ಆನೇಕಲ್ ತಾಲೂಕಿನ ಐತಿಹಾಸಿಕ ದೇವಾಲಯ ಶ್ರೀ ಚಂಪಕಧಾಮ ಸ್ವಾಮಿ ದೇವಾಲಯದಲ್ಲಿ ನಡೆಯುತ್ತಿದೆ. ವಿನೋದ್ ಮಾಸ್ಟರ್ ಸಾಹಸ ನಿರ್ದೇಶನ ಚಿತ್ರಕ್ಕಿದ್ದು ಸುಜ್ಞಾನಮೂರ್ತಿ ಛಾಯಾಗ್ರಹಣದಲ್ಲಿ ಚಿತ್ರ ಮೂಡಿ ಬರುತ್ತಿದೆ. ಡಾರ್ಲಿಂಗ್ ಕೃಷ್ಣ, ಪ್ರಕಾಶ್ ರಾಜ್ ನಟನೆಯ ತಂದೆ–ಮಗನ ಬಾಂಧವ್ಯ ಸಾರುವ ಮನಮುಟ್ಟುವ ಸಿನಿಮಾ ಫಾದರ್ ಆಗಿದೆ.

## ಸಿಂಹಾಸನ ಏರಿದ ತೆಲುಗಿನ ರೆಬೆಲ್‌ಸ್ಟಾರ್..

ಪ್ಯಾನ್ ಇಂಡಿಯಾ ಚಿತ್ರ 'ದಿ ರಾಜಾ ಸಾಬ್' ಇದೀಗ ಕುತೂಹಲಕ್ಕೆ ಮತ್ತಷ್ಟು ಕಿಚ್ಚು ಹಚ್ಚಿದೆ. ಏಕೆಂದರೆ ಈ ಸಿನಿಮಾ ಮೇಕರ್ಸ್ ಇದೀಗ, ಪ್ರಭಾಸ್ ಅವರ ಬರ್ತ್‌ಡೇ ಪ್ರಯುಕ್ತ ವಿಶೇಷ ಮೋಷನ್ ಪೋಸ್ಟರ್ ಅನ್ನು ಹೊರತಂದಿದ್ದಾರೆ. ಹಾರರ್ ಥ್ರಿಲ್ಲರ್ ಜಾನರ್‌ನ ಈ ಸಿನಿಮಾದಲ್ಲಿ ಅಷ್ಟೇ ವಿಶೇಷ ಗೆಟಪ್‌ನಲ್ಲಿ ಕಾಣಿಸಿಕೊಂಡಿದ್ದಾರೆ ಪ್ರಭಾಸ್. 2 ನಿಮಿಷಗಳ ಮೋಷನ್ ಪೋಸ್ಟರ್ ಕಾಡಿನ ಮಧ್ಯದಲ್ಲಿ ಪಿಯಾನೋದಲ್ಲಿ ಕಾಡುವ "ಹ್ಯಾಪಿ ಬರ್ತ್‌ಡೇ" ಟ್ಯೂನ್‌ನೊಂದಿಗೆ ಶುರುವಾಗುತ್ತದೆ. ವೀಕ್ಷಕರನ್ನು ವಿಂಟೇಜ್ ಅರಮನೆಗೆ ಸಾಗಿಸುವ ಮೊದಲು ಕಾಡಿನಲ್ಲಿ ಸಂಚರಿಸುತ್ತಿರುವ ನಿಗೂಢ ವ್ಯಕ್ತಿಯೂ ಅಲ್ಲಿ ಕಾಣಿಸುತ್ತಾನೆ. ಒಮ್ಮಿಂದೊಮ್ಮೆ ಆ ಮನೆಯ ಬಾಗಿಲು ತೆರೆಯುತ್ತದೆ. ಅದರೊಳಗಿಂದ ಸೂಪರ್‌ಸ್ಟಾರ್ ಪ್ರಭಾಸ್ ಅವರ ದಿ ರಾಜಾ ಸಾಬ್ ಲುಕ್ ಅನಾವರಣಗೊಳ್ಳುತ್ತದೆ. ನಂತರ "ಹ್ಯಾಪಿ ಬರ್ತ್‌ಡೇ, ರೆಬೆಲ್ ಸಾಬ್" ಎಂದು ಚಿತ್ರತಂಡ ಪ್ರಭಾಸ್‌ಗೆ ಶುಭಕೋರಿದೆ.



## 'ಪುಷ್ಪ–2' ಹೊಸ ಪೋಸ್ಟರ್ ರಿಲೀಸ್..

ಈ ವರ್ಷದ ಪ್ಯಾನ್ ಇಂಡಿಯಾ ಸಿನಿಮಾಗಳಲ್ಲೊಂದು ಪುಷ್ಪ–2. ಡಿಸೆಂಬರ್ 6ಕ್ಕೆ ವಿಶ್ವಾದ್ಯಂತ ಚಿತ್ರ ಬಿಡುಗಡೆಯಾಗ್ತಿದೆ. ಪುಷ್ಪ ಸೀಕ್ವೆಲ್ ತೆರೆಗೆ ಬರೋದಿಕ್ಕೆ ಹೆಚ್ಚು ಕಮ್ಮಿ 50 ದಿನಗಳು ಬಾಕಿ ಉಳಿದಿವೆ. ಈಗ ಚಿತ್ರತಂಡ ಪುಷ್ಪರಾಜ್‌ನ ಹೊಸ ಲುಕ್ ಬಿಟ್ಟು ಕಿಕ್ ಹೆಚ್ಚಿಸಿದೆ. ಇತ್ತೀಚೆಗಷ್ಟೇ ಚಿತ್ರತಂಡ ಹೊಸ ಪೋಸ್ಟರ್ ಬಿಡುಗಡೆ ಮಾಡಿದೆ. ಈ ಹೊಸ ಪೋಸ್ಟರ್‌ಗೆ ಪ್ರೇಕ್ಷಕರು ಮತ್ತು ಅಬಿಮಾನಿಗಳು ಫಿದಾ ಆಗಿದ್ದಾರೆ. ಪುಷ್ಪ–2 ಸಿನಿಮಾದ ಟೀಸರ್ ಹಾಗೂ ಹಾಡುಗಳು ಈಗಾಗ್ಲೇ ಭಾರೀ ಸದ್ದು ಮಾಡಿವೆ. ಮಿಲಿಯನ್ಸ್ ಗಟ್ಟಲೇ ವೀವ್ಸ್ ಪಡೆದುಕೊಂಡಿವೆ. ಮೈತ್ರಿ ಮೂವೀ ಮೇಕರ್ಸ್ ಹಾಗೂ ಸುಕುಮಾರ್ ರೈಟಿಂಗ್ ನಿರ್ಮಾಣದಡಿ ಮೂಡಿಬರ್ತಿರುವ ಈ ಸೀಕ್ವೆಲ್‌ಗಾಗಿ ರಾಕ್ ಸ್ಟಾರ್ ದೇವಿಪ್ರಸಾದ್ ಸಂಗೀತ, ಮಿರೆಸ್ಲೋ ಕುಬಾ ಬ್ರೋಜೆಕ್ ಛಾಯಾಗ್ರಾಹಣ ಒದಗಿಸಿದ್ದಾರೆ.









Edited,Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ Digantha Mudrana Limited, Yeyyadi, Mangaluru 575008 email: karavalitharangini@gmail.com PH: +91 9880109212